ಸಂಪುಟ : 10 ಸಂಚಿಕೆ 22 ಪುಟ : 4+2 ಬೆಲೆ: 3.00 ಬುಧವಾರ ಫೆಬ್ರವರಿ 19 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 22 Pages : 4+2 Price : 3.00 Wednesday February 19 2025 Gadag RNI No: KARKAN/2015/63412 E-mail: vijayasakshidaily@gmail.com Post Regn.No: GDG/72/2023-25

**ಕಾರ್ಮಿಕ ಇಲಾಖೆ ಪ್ರಗತಿ ಪರಿಶೀಲನಾ ಸಭೆ ಜರುಗಿಸಿದ ಸಚಿವ ಸಂತೋಷ್ ಲಾಡ್ ಸೂಚನೆ**

## ಕನಿಷ್ಠ ವೇತನ ಪಾವತಿಸದ ಏಜೆನ್ಸಿಗಳ ಪರವಾನಿಗೆ ರದ್ದುಪಡಿಸಿ

■ **ವಿಜಯಸಾಕ್ಷಿ ಸುದ್ದಿ, ಗದಗ**

ಕಾರ್ಮಿಕರ ಕಲ್ಯಾಣಕ್ಕಾಗಿಯೇ ಕಾರ್ಮಿಕ ಇಲಾಖೆ ಕಾರ್ಯನಿರ್ವಹಿಸಬೇಕು. ಕಾರ್ಮಿಕರಿಗೆ ಕನಿಷ್ಠ ವೇತನ ಹಾಗೂ ವಿವಿಧ ಸೌಲಭ್ಯಗಳನ್ನು ಗುತ್ತಿಗೆ ಪಡೆದ ಏಜೆನ್ಸಿದಾರರು ಪಾವತಿಸಿರುವ ಬಗ್ಗೆ ಅಧಿಕಾರಿಗಳು ಪರಿಶೀಲಿಸಿ, ನಿಯಮಾನುಸಾರ ವೇತನ ಪಾವತಿಸದ ಏಜೆನ್ಸಿಗಳ ಪರವಾನಿಗೆಯನ್ನು ರದ್ದುಪಡಿಸಬೇಕೆಂದು ಕಾರ್ಮಿಕ ಸಚಿವ ಸಂತೋಷ್ ಲಾಡ್ ಸೂಚಿಸಿದರು.

ಗದಗ ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಕಾರ್ಮಿಕ ಇಲಾಖೆ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಂಗಳವಾರ ಅವರು ಮಾತನಾಡಿದರು.

ಶ್ರಮ ವಹಿಸಿ ದುಡಿಯುವ ವರ್ಗಕ್ಕೆ ಸರ್ಕಾರದಿಂದ ಸರಿಯಾಗಿ ವೇತನ ಪಾವತಿಯಾಗುವಂತೆ ಕ್ರಮ ಕೈಗೊಳ್ಳಬೇಕು. ವೇತನ ಹಾಗೂ ಪಿ.ಎಫ್. ಪಾವತಿಸದ ಏಜೆನ್ಸಿಗಳ ಮೇಲೆ ನಿರ್ದಾಕ್ಷಿಣ್ಯ ಕ್ರಮಗಳನ್ನು ಅಧಿಕಾರಿಗಳು ಕೈಗೊಳ್ಳುವ ಮೂಲಕ ಕಾರ್ಮಿಕರ ಶ್ರೇಯೋಭಿವೃದ್ಧಿಗಾಗಿ ಇಲಾಖಾ ಅಧಿಕಾರಿಗಳು ಕರ್ತವ್ಯ

> ಗದಗ ಜಿಲ್ಲೆಯಲ್ಲಿ ಬಾಲ ಕಾರ್ಮಿಕರ ಬಳಕೆ ನಿಯಂತ್ರಣವಾಗಿರಬಹುದಾದರೂ ನಿರ್ನಾಮವಾಗಿಲ್ಲ. ಅಧಿಕಾರಿ ವರ್ಗ ಬಾಲಕಾರ್ಮಿಕ ಬಳಕೆ ಆಗದಂತೆ ಸಂಪೂರ್ಣ ಶಿಸ್ತು ಕ್ರಮ ಕೈಗೊಳ್ಳಲಿ.
>
> **– ಎಚ್.ಕೆ. ಪಾಟೀಲ.**
> **ಗದಗ ಜಿಲ್ಲಾ ಉಸ್ತುವಾರಿ ಸಚಿವರು.**



ನಿರ್ವಹಿಸುವಂತೆ ನಿರ್ದೇಶನ ನೀಡಿದರು. ಕಾರ್ಮಿಕ ಕಾಯ್ದೆಗಳ ಉಲ್ಲಂಘನೆ ಪ್ರಕರಣಗಳ ಕುರಿತು ತಪಾಸಣೆ ಮಾಡಿದ ದಾಖಲೆಗಳ ಬಗ್ಗೆ ಅಧಿಕಾರಿಗಳ ಕಾರ್ಯ ವೈಖರಿ ಬಗ್ಗೆ ಅಸಮಾಧಾನ ವ್ಯಕ್ತಪಡಿಸುತ್ತಾ ಮುಂದಿನ ದಿನಗಳಲ್ಲಿ ಶ್ರದ್ಧೆಯಿಂದ ಕರ್ತವ್ಯ ನಿರ್ವಹಿಸುವಂತೆ ತಿಳಿಸಿದರು.

ಪ್ರತಿ ಕೆಡಿಪಿ ಸಭೆಯಲ್ಲಿಯೂ ಬಾಲಕಾರ್ಮಿಕರ ಬಗ್ಗೆ ಪರಿಶೀಲನೆಯಾಗಬೇಕು. ಜೊತೆಗೆ ಬಾಲಕಾರ್ಮಿಕ ಪ್ರಕರಣಗಳ ಉಲ್ಲಂಘನೆ ಕುರಿತಂತೆ ಸಭೆಗಳು ಜರುಗಬೇಕು. ಬಾಲಕಾರ್ಮಿಕ ಪದ್ಧತಿ ಹೋಗಲಾಡಿಸಲು ಜಾಗೃತಿ ಕಾರ್ಯಕ್ರಮಗಳನ್ನು ಜಿಲ್ಲಾ ಮಟ್ಟದಲ್ಲಿ ಜರುಗಿಸಿ ಪ್ರತಿ ತಿಂಗಳು ವರದಿ ಸಲ್ಲಿಸುವಂತೆ ಪೊಲೀಸ್ ಇಲಾಖೆಗೆ ಸೂಚನೆ ನೀಡಿದರು.

ಜಿಲ್ಲಾ ಮಟ್ಟದಲ್ಲಿ ಜಿಲ್ಲಾಡಳಿತದ ಮುಖ್ಯಸ್ಥರು ಜಾಗೃತಿ ಕಾರ್ಯಕ್ರಮಗಳನ್ನು ಮಾಡುವುದರಿಂದ ಪರಿಣಾಮಕಾರಿ ಜಾಗೃತಿ ಮೂಡಲಿದೆ ಎಂದ ಸಚಿವರು, ಇಲಾಖೆಯ ಅಧಿಕಾರಿಗಳು ನಿಯಮಿತವಾಗಿ ಹೋಟೆಲ್, ಬಾಯ್ಲರ್, ಕಟ್ಟಡ ನಿರ್ಮಾಣ ಕಾಮಗಾರಿ ಸ್ಥಳಕ್ಕೆ ಭೇಟಿ ನೀಡಿ ಬಾಲ ಕಾರ್ಮಿಕರ ಬಳಕೆ ಮಾಡುವ ಬಗ್ಗೆ ಪರಿಶೀಲಿಸಬೇಕು. ಕಾರ್ಮಿಕರಿಗೆ ಇರುವ ಸೌಲಭ್ಯಗಳ ಕುರಿತು ಅರಿವು ಮೂಡಿಸಿ ಸೌಲಭ್ಯಗಳು ತಲುಪಿರುವ ಬಗ್ಗೆ ಮನವರಿಕೆ ಮಾಡಿಕೊಳ್ಳಬೇಕೆಂದು ಹೇಳಿದರು.

ಜಿಲ್ಲಾ ಕಾರ್ಮಿಕ ಅಧಿಕಾರಿ ಶ್ರೀಶೈಲ ಸೋಮನಕಟ್ಟಿ ಮಾತನಾಡಿ, ಏಪ್ರಿಲ್ 1ರಿಂದ ಈವರೆಗೆ ಜಿಲ್ಲೆಯಲ್ಲಿ 1730 ತಪಾಸಣೆಗಳನ್ನು ನಡೆಸಲಾಗಿದ್ದು, 361 ಕಾರ್ಮಿಕರ ಉಲ್ಲಂಘನಾ ಪ್ರಕರಣಗಳು ಕಂಡುಬಂದಿವೆ. 296 ಉಲ್ಲಂಘನಾ ಪ್ರಕರಣಗಳನ್ನು ಸರಿಪಡಿಸಲಾಗಿದೆ. 62 ಉಲ್ಲಂಘನಾ ಪ್ರಕರಣಗಳಿಗೆ ಸಂಬಂಧಿಸಿದಂತೆ ನೋಟೀಸ್ ಪ್ರಕಟಿಸಲಾಗಿದೆ. 5 ಪ್ರಕರಣಗಳನ್ನು ದಾಖಲಿಸಲಾಗಿದೆ ಎಂದು ಸಭೆಗೆ ಮಾಹಿತಿ ನೀಡಿದರು.

ಬಾಲ ಕಾರ್ಮಿಕ ಹಾಗೂ ಕಿಶೋರ ಕಾರ್ಮಿಕರಿಗೆ ಸಂಬಂಧಿಸಿದಂತೆ 417 ತಪಾಸಣೆ ಕೈಗೊಳ್ಳಲಾಗಿದೆ. 3 ಪ್ರಕರಣಗಳಲ್ಲಿ 32 ಸಾವಿರ ರೂ. ದಂಡ ವಿಧಿಸಲಾಗಿದೆ. ಕೈಗಾರಿಕಾ ವಿವಾದ ಕಾಯ್ದೆಯಡಿ ಸರ್ಕಾರಿ ಮಂಡಳಿ ಹಾಗೂ ಖಾಸಗಿಯಿಂದ 37 ದೂರುಗಳು ಸ್ವೀಕೃತವಾಗಿದ್ದು, 5 ದೂರುಗಳನ್ನು ಹೊರತುಪಡಿಸಿ ಉಳಿದೆಲ್ಲ ದೂರುಗಳನ್ನು ಇತ್ಯರ್ಥಪಡಿಸಲಾಗಿದೆ. ಉಪದಾನ ಪಾವತಿ ಕಾಯ್ದೆಯಡಿ ಬಾಕಿ ಇದ್ದ 155 ವಿವಾದ ಸೇರಿದಂತೆ ಒಟ್ಟು 192 ಸ್ವೀಕೃತಿಯಾದ ಪ್ರಕರಣಗಳಿವೆ. ಈ ಪೈಕಿ 156 ಬಾಕಿ ಇದ್ದು, ಉಳಿದ ಪ್ರಕರಣಗಳನ್ನು ಇತ್ಯರ್ಥಪಡಿಸಲಾಗಿದೆ ಎಂದರು.

> ರಾಜ್ಯದಲ್ಲಿ 58 ಲಕ್ಷ ಕಾರ್ಮಿಕ ಕಾರ್ಡ್ ಹೊಂದಿದ್ದರೂ ಅವೆಲ್ಲವುಗಳನ್ನು ಕಟ್ಟುನಿಟ್ಟಾಗಿ ಪರಿಶೀಲಿಸಿ ಅಕ್ರಮ ಕಾರ್ಡ್‌ಗಳನ್ನು ಅನರ್ಹಗೊಳಿಸುವ ಮೂಲಕ ರಾಜ್ಯದಲ್ಲಿ ಒಟ್ಟು 32 ಲಕ್ಷ ಕಾರ್ಡ್‌ಗೆ ಮಿತಿಗೊಳಿಸಲಾಗಿದೆ. ಹೊಸ ಕಾರ್ಡ್ ನೋಂದಣಿ ಕುರಿತಂತೆ ಕಾರ್ಮಿಕ ಇಲಾಖೆಯಲ್ಲಿ ಅರ್ಜಿ ಪರಿಶೀಲನೆಯನ್ನು ಅಧಿಕಾರಿಗಳು ಸರಿಯಾಗಿ ಮಾಡಬೇಕು. ಇಲ್ಲದಿದ್ದಲ್ಲಿ ನಿಮ್ಮನ್ನೇ ಹೊಣೆಗಾರರನ್ನಾಗಿ ಶಿಕ್ಷಿಸಬೇಕಾಗುತ್ತದೆ ಎಂದು ಸಚಿವ ಸಂತೋಷ್ ಲಾಡ್ ಅಧಿಕಾರಿಗಳಿಗೆ ಎಚ್ಚರಿಕೆ ನೀಡಿದರು.


ಜಿಲ್ಲೆಯಲ್ಲಿ ಒಟ್ಟು 1,31,535 ಕಾರ್ಮಿಕ ಕಾರ್ಡ್‌ಗಳ ನೋಂದಣಿಯಾಗಿದ್ದು, ಈ ಪೈಕಿ 56,671 ಕಾರ್ಮಿಕ ಕಾರ್ಡ್‌ಗಳು ಚಾಲ್ತಿಯಲ್ಲಿವೆ. ತಾಯಿ–ಮಗು ಸಹಾಯಹಸ್ತ ಯೋಜನೆಯಡಿ ಜಿಲ್ಲೆಯಲ್ಲಿ 167 ಅರ್ಜಿ ಸ್ವೀಕೃತವಾಗಿದ್ದು, 141 ವಿಲೇವಾರಿ ಮಾಡಲಾಗಿದೆ. 73 ಅರ್ಜಿಗಳನ್ನು ಅನುಮೋದಿಸಿದೆ ಎಂದು ಸಭೆಗೆ ವಿವರವಾದ ಮಾಹಿತಿ ಒದಗಿಸಿದರು.

ಗದಗ ಜಿಲ್ಲೆಯಲ್ಲಿ 2023–2024ರಿಂದ ಈವರೆಗೆ ಕಾರ್ಮಿಕ ಇಲಾಖೆಯ ವಿವಿಧ ಯೋಜನೆಯಡಿ ಒದಗಿಸಲಾದ ಅನುದಾನ ಹಾಗೂ ಸೌಲಭ್ಯದ ವಿವರ ಹೀಗಿದೆ.

▶▶ 3ನೇ ಪುಟಕ್ಕೆ

## ಮೈಕ್ರೋ ಫೈನಾನ್ಸ್ ಕಿರುಕುಳ ತಡೆಗೆ ಸಹಾಯವಾಣಿ

■ **ವಿಜಯಸಾಕ್ಷಿ ಸುದ್ದಿ, ಗದಗ**



ಇತ್ತೀಚಿನ ದಿನಗಳಲ್ಲಿ ಕರ್ನಾಟಕ ರಾಜ್ಯದಲ್ಲಿ ಮೈಕ್ರೋ ಫೈನಾನ್ಸ್ ಕಂಪನಿಗಳು ಸಾಲ ವಸೂಲಾತಿ ನೆಪದಲ್ಲಿ ಸಾಲಗಾರರಿಗೆ ಕಿರುಕುಳ ನೀಡುತ್ತಿರುವ ಪ್ರಕರಣಗಳು ಜಾಸ್ತಿಯಾಗುತ್ತಿರುವುದರಿಂದ ಕರ್ನಾಟಕ ಸರಕಾರವು ಕರ್ನಾಟಕ ಕಿರು ಸಾಲ ಮತ್ತು ಸಣ್ಣ ಸಾಲ (ಬಲವಂತದ ಕ್ರಮಗಳ ಪ್ರತಿಬಂಧಕ) ಅದ್ಯಾದೇಶ, 2025ನ್ನು 12–02–2025ರಿಂದ ಜಾರಿಗೊಳಿಸಿದೆ.

ಈ ಆದ್ಯಾದೇಶವನ್ನು ಕಟ್ಟುನಿಟ್ಟಾಗಿ ಜಾರಿಗೆ ತರುವ ಉದ್ದೇಶದಿಂದ ಸಾರ್ವಜನಿಕರಿಗೆ ಮೈಕ್ರೋ ಫೈನಾನ್ಸ್ ಸಂಸ್ಥೆಯವರು ನೀಡಬಹುದಾದ ಕಿರುಕುಳ ಹಾಗೂ ಬೆದರಿಕೆಯನ್ನು ವರದಿ ಮಾಡಿಕೊಳ್ಳಲು ಪ್ರತಿ ಜಿಲ್ಲಾಧಿಕಾರಿ ಕಚೇರಿಯಲ್ಲಿ ಸಹಾಯವಾಣಿ ಆರಂಭಿಸಲು ಸೂಚನೆ ನೀಡಲಾಗಿದೆ. ಸಾರ್ವಜನಿಕರ ಕರೆಗಳನ್ನು ಸ್ವೀಕರಿಸಿ ಸಾರ್ವಜನಿಕರ ಅಹವಾಲುಗಳಿಗೆ ತಕ್ಕಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ವಿಷಯವನ್ನು ತಿಳಿಸಲು (08372–239177) ಹೆಲ್ಪ್ ಡೆಸ್ಕ್‌ನ್ನು ತೆರೆಯಲಾಗಿದೆ. ಜಿಲ್ಲೆಯ ಸಾರ್ವಜನಿಕರು ಮೈಕ್ರೋ ಫೈನಾನ್ಸ್ ಸಂಸ್ಥೆಗಳ ವಿರುದ್ಧ ತಮ್ಮ ಕಿರುಕುಳ ಹಾಗೂ ಬೆದರಿಕೆ ದೂರುಗಳಿದ್ದಲ್ಲಿ ಹೆಲ್ಪ್ ಡೆಸ್ಕ್‌ನ್ನು ಸಂಪರ್ಕಿಸಲು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ರಾಜ್ಯಮಟ್ಟದ ಯುವಜನೋತ್ಸವ, ಗಾಂಧೀಜಿಯವರ ಮೂಲ ಕೃತಿಗಳ ಅನುವಾದಿತ ಪುಸ್ತಕಗಳ ಬಿಡುಗಡೆ ಸಮಾರಂಭದಲ್ಲಿ ಸಚಿವ ಎಚ್.ಕೆ. ಪಾಟೀಲ**

## ಜ್ವಲಂತ ಸಮಸ್ಯೆಗಳನ್ನು ಸವಾಲಾಗಿ ಸ್ವೀಕರಿಸಿ

■ **ವಿಜಯಸಾಕ್ಷಿ ಸುದ್ದಿ, ಗದಗ**

ಯುವಕರು ಗಾಂಧಿಯವರ ವಿಚಾರಗಳನ್ನು ಅಳವಡಿಸಿಕೊಂಡು ದೇಶದ ಪರಿವರ್ತನೆಯ ಕಡೆಗೆ ಶ್ರಮಿಸಬೇಕು ಎಂದು ರಾಜ್ಯದ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಕೆ. ಪಾಟೀಲ ತಿಳಿಸಿದರು.

ನಗರದ ಆರ್‌ಡಿಪಿಆರ್ ವಿಶ್ವವಿದ್ಯಾಲಯದ ಗ್ರಾಮ ಗಂಗೋತ್ರಿ ಕ್ಯಾಂಪಸ್‌ನಲ್ಲಿ ಮಂಗಳವಾರ ರಾಜ್ಯ ಎನ್.ಎಸ್.ಎಸ್ ಕೋಶ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯದ ರಾಷ್ಟ್ರೀಯ ಸೇವಾ ಯೋಜನೆ ಸಹಯೋಗದಲ್ಲಿ 2024–25ನೇ ಸಾಲಿನ ರಾಜ್ಯಮಟ್ಟದ ಯುವಜನೋತ್ಸವ ಹಾಗೂ ಗಾಂಧೀಜಿಯವರ ಮೂಲ ಕೃತಿಗಳ ಅನುವಾದಿತ ಪುಸ್ತಕಗಳ ಬಿಡುಗಡೆ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದರು.

ಗದಗ ಜಿಲ್ಲೆ ಸಂಗೀತ, ಸಾಂಸ್ಕೃತಿಕ ಸೇರಿದಂತೆ ಎಲ್ಲಾ ರಂಗಗಳಲ್ಲಿ ತನ್ನ ಛಾಪನ್ನು ಮೂಡಿಸಿದೆ. ಜಿಲ್ಲೆಯ ಕಣಗಿನಹಾಳ ಗ್ರಾಮದಲ್ಲಿ ಸಹಕಾರ ಚಳುವಳಿಯ ಪರಿಕಲ್ಪನೆ ಉದಯವಾಗಿದೆ. ದೇಶದಲ್ಲಿ ಸ್ವಾತಂತ್ರ್ಯ ಹೋರಾಟ ನಿರ್ಮಾಣ ಮಾಡುವಲ್ಲಿ ಮುಂಬೈ ಪ್ರಾಂತ್ಯದಲ್ಲಿಯೇ ಗದದ ಜಿಲ್ಲೆಯು ಅತ್ಯಂತ



ಉತ್ಸಾಹದಿಂದ ಭಾಗವಹಿಸಿದ್ದು ಈ ಹಿಂದೆ ಕರ್ನಾಟಕ ರಾಜ್ಯ ಪ್ರದೇಶ ಕಾಂಗ್ರೆಸ್ ಕೇಂದ್ರ ಕಚೇರಿಯು ಗದಗನಲ್ಲಿ ನಾವೆಲ್ಲರೂ ಮರೆಯುವಂತಿಲ್ಲ. ಕನ್ನಡ ಸಾಹಿತ್ಯಕ್ಕೆ ಅಗಾಧವಾದ ಕೊಡುಗೆಯನ್ನು ನೀಡಿರುವ ಪಂಪ, ರನ್ನ, ಕುಮಾರವ್ಯಾಸ, ಅತ್ತಿಮಬ್ಬೆ, ಚಾಮರಸ, ದುರ್ಗಸಿಂಹ, ಅಬ್ಬಯಕ್ಕ, ನಯಸೇನ ಇವರೆಲ್ಲರೂ ಗದಗ ಜಿಲ್ಲೆಯ ಕೊಡುಗೆ ಎಂಬುದು ನಮ್ಮೆಲ್ಲರಿಗೂ ತಿಳಿದಿರುವ ವಿಷಯ. ಈಗಿನ ಆಧುನಿಕ ಸಾಹಿತ್ಯದಲ್ಲಿ ಆರ್.ಸಿ. ಹಿರೇಮಠ್, ಚನ್ನವೀರ್ ಕಣವಿ, ಗಿರಡ್ಡಿ ಗೋವಿಂದರಾಜು, ಸೋಮಶೇಖರ್ ಇಮ್ರಾಪುರ್, ಅಂದಾನಪ್ಪ ಮೇಟಿ ಹೀಗೆ ಹಲವರ ಕೊಡುಗೆಯಿದೆ ಎಂದರು.

ಮಹಾತ್ಮ ಗಾಂಧೀಜಿಯವರು ಹೇಳಿದಂತೆ ಶಾಂತಿ, ಸಹನೆ, ಪ್ರೀತಿ ಅಳವಡಿಸಿಕೊಂಡು ದ್ವೇಷ–ಅಸೂಯೆಯನ್ನು ಮರೆತು ಒಳ್ಳೆಯ ಮನಸ್ಥಿತಿಯೊಂದಿಗೆ ದೇಶ ನಿರ್ಮಾಣ ಮಾಡುವುದು ಎಲ್ಲ ಯುವಕರ ಕರ್ತವ್ಯ. ದೇಶದಲ್ಲಿರುವ ಅನೇಕ ಜ್ವಲಂತ ಸಮಸ್ಯೆಗಳನ್ನು ಸವಾಲುಗಳಾಗಿ ತೆಗೆದುಕೊಂಡು ಯುವಕರು ಕ್ರಾಂತಿಯ ಕಹಳೆಯನ್ನು ಊದಿ ಪರಿವರ್ತನೆಯ ರಾಷ್ಟ್ರ ನಿರ್ಮಾಣದಲ್ಲಿ ಒಮ್ಮತದಿಂದ ಕೆಲಸ ಮಾಡಬೇಕು ಎಂದು ಸಚಿವ ಡಾ. ಎಚ್.ಕೆ. ಪಾಟೀಲ ತಿಳಿಸಿದರು.

ವಿ.ಪ ಮಾಜಿ ಸಭಾಪತಿಗಳಾದ ವಿ.ಆರ್. ಸುದರ್ಶನ್ ಮಾತನಾಡಿ, ಎನ್‌ಎಸ್‌ಎಸ್ ಮತ್ತು ಎನ್‌ಸಿಸಿಯಂತಹ ತರಬೇತಿಗಳು ಪ್ರತಿಯೊಬ್ಬ ವಿದ್ಯಾರ್ಥಿಯ ವ್ಯಕ್ತಿತ್ವ ಸುಧಾರಿಸುತ್ತವೆ. ಯುವಕರು ದೇಶದ ಭವಿಷ್ಯ ನಿರ್ಮಿಸುವಲ್ಲಿ ಅತ್ಯಂತ ಮಹತ್ವದ ಪಾತ್ರವನ್ನು ವಹಿಸುತ್ತಾರೆ. ಹಾಗಾಗಿ ಅವರು ಕೇವಲ ತಮ್ಮ ಹಕ್ಕುಗಳನ್ನು ಕೇಳದೆ ತಮ್ಮ ಜವಾಬ್ದಾರಿಯನ್ನು ಅರಿತುಕೊಂಡು ದೇಶ ನಿರ್ಮಾಣದಲ್ಲಿ ಹಕ್ಕುಗಳಿಗೆ ನೀಡುವ ಪ್ರಾಮುಖ್ಯತೆಯನ್ನೇ ತಮ್ಮ ಜವಾಬ್ದಾರಿಗಳಿಗೂ ನೀಡಬೇಕು. ಗದಗ ಜಿಲ್ಲೆಯ ಅಭಿವೃದ್ಧಿಗೆ ದಿವಂಗತ ಕೆ.ಹೆಚ್. ಪಾಟೀಲರು ಹಾಗೂ ಎಚ್.ಕೆ. ಪಾಟೀಲರ ಕೊಡುಗೆ ಜಿಲ್ಲೆಯ ಅಭಿವೃದ್ಧಿಗೆ ಸಾಕ್ಷಿಯಾಗಿದೆ ಎಂದು ಹೇಳಿದರು.

> ದಿನದಿಂದ ದಿನಕ್ಕೆ ಗ್ರಾಮೀಣ ವ್ಯವಸ್ಥೆಯ ಆರ್ಥಿಕತೆ ಸೊರಗುತ್ತಿದೆ. ಹಳ್ಳಿಗಳಲ್ಲಿ ಎತ್ತುಗಳ ಸಂಖ್ಯೆ ಕಡಿಮೆಯಾಗುತ್ತಿದೆ. ವ್ಯವಸಾಯ ಮಾಡುವ ಯುವಕರ ಸಂಖ್ಯೆ ಕಡಿಮೆಯಾಗುತ್ತಿದೆ. ಇದು ಎಲ್ಲರಿಗೂ ಆತಂಕ ತರುವ ವಿಷಯ. ಗಾಂಧೀಜಿಯವರ ಕನಸಿನಂತೆ ಗ್ರಾಮದ ಅಭಿವೃದ್ಧಿ ದೇಶದ ಅಭಿವೃದ್ಧಿಯಾಗಿದೆ. ಯುವಕರು ಕೆಲಸವನ್ನ ಅರಸಿ ನಗರಕ್ಕೆ ಹೋಗುತ್ತಿದ್ದಾರೆ. ಇದರ ಬಗ್ಗೆ ಗಂಭೀರವಾದ ಚಿಂತನೆ ನಡೆಯಬೇಕಿದೆ.
>
> **– ಎಚ್.ಕೆ. ಪಾಟೀಲ.**
> **ಸಚಿವರು, ಗದಗ.**

ಈ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯಕುಲಪತಿ (ಪ್ರ) ಕುಲಸಚಿವರಾದ ಪ್ರೊ. ಡಾ. ಸುರೇಶ ನಾಡಗೌಡರ, ಡಿ. ಜೀವನಕುಮಾರ, ಡಾ. ಮೀನಾ ದೇಶಪಾಂಡೆ, ಪ್ರಶಾಂತ ಮೇರವಾಡೆ, ಡಾ. ಅಬ್ದುಲ್ ಮುಲ್ಲಾ ಸೇರಿದಂತೆ ಎನ್‌ಸಿಸಿ, ಎನ್‌ಎಸ್‌ಎಸ್ ವಿಶ್ವವಿದ್ಯಾಲಯದ ವಿದ್ಯಾರ್ಥಿಗಳು ಹಾಜರಿದ್ದರು.

ಕಾರ್ಯಕ್ರಮವನ್ನು ಪ್ರಕಾಶ ಮಾಚೇನಹಳ್ಳಿ ನಿರ್ವಹಿಸಿದರು.

## ಶಿವಾಜಿ ಸಮುದಾಯ ಭವನ ಉದ್ಘಾಟನೆ ಇಂದು




■ **ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಸಮೀಪದ ವಡೆಯರ ಮಲ್ಲಾಪೂರ ಗ್ರಾಮದ ಶ್ರೀ ಛತ್ರಪತಿ ಶಿವಾಜಿ ಕ್ಷತ್ರಿಯ ಮರಾಠಾ ಸಮಾಜ ಸಂಘದ ವತಿಯಿಂದ ಫೆ.19ರಂದು ಮುಂಜಾನೆ 11 ಗಂಟೆಗೆ ಛತ್ರಪತಿ ಶಿವಾಜಿ ಮಹಾರಾಜರ 398ನೇ ಜಯಂತ್ಯುತ್ಸವ ಹಾಗೂ ಶಿವಾಜಿ ಸಮುದಾಯ ಭವನದ ಉದ್ಘಾಟನಾ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಮುಂಜಾನೆ 8 ಗಂಟೆಗೆ ಪೂರ್ಣಕುಂಭ ಹಾಗೂ ಸಕಲ ವಾದ್ಯವೈಭವಗಳೊಂದಿಗೆ ಶಿವಾಜಿ ಮಹಾರಾಜರ ಭಾವಚಿತ್ರದ ಮೆರವಣಿಗೆ ನಡೆಯಲಿದೆ. 9.30ಕ್ಕೆ ಪಿ.ಪಿ. ಗಾಯಕವಾಡ ಧ್ವಜಪೂಜೆ ನೆರವೇರಿಸುವರು. 10 ಗಂಟೆಗೆ ತೊಟ್ಟಿಲು ಪೂಜಾ ಕಾರ್ಯಕ್ರಮ ನಡೆಯಲಿದೆ. 11 ಗಂಟೆಗೆ ಸಮಾರೋಪ ಸಮಾರಂಭದಲ್ಲಿ ಹತ್ತಿಮತ್ತೂರ ವಿರಕ್ತಮಠದ ಶ್ರೀ ನಿಜಗುಣ ಶಿವಯೋಗಿಗಳು ದಿವ್ಯ ಸಾನ್ನಿಧ್ಯ ವಹಿಸಲಿದ್ದಾರೆ. ಶಾಸಕ ಡಾ.ಚಂದ್ರು ಲಮಾಣಿ ಸಮುದಾಯ ಭವನ ಉದ್ಘಾಟಿಸಲಿದ್ದಾರೆ.

ಹಾನಗಲ್ ಶಾಸಕ ಶ್ರೀನಿವಾಸ ಮಾನೆ ಸ'ವ'ು'ಾ'ರ'ಂ'ಭ'ವ'ನ'್ನ' ಉದ್ಘಾಟಿಸಲಿದ್ದಾರೆ. ನಿವೃತ್ತ ಶಿಕ್ಷಕ ಮಂಜುನಾಥ ಡಂಬಳ ಅಧ್ಯಕ್ಷತೆ ವಹಿಸಲಿದ್ದು, ಮುಖ್ಯ ಅತಿಥಿಗಳಾಗಿ ಮಾಜಿ ಶಾಸಕರುಗಳಾದ ಗಂಗಣ್ಣ ಮಹಾಂತಶೆಟ್ಟರ, ಜಿ.ಎಸ್. ಗಡ್ಡದೇವರಮಠ, ರಾಮಣ್ಣ ಲಮಾಣಿ, ರಾಮಕೃಷ್ಣ ದೊಡ್ಡಮನಿ, ಶಂಕರ ಮರಾಠೆ, ಶರಣಬಸವ ಹವಾಲ್ದಾರ ಸೇರಿದಂತೆ ಅನೇಕ ಗಣ್ಯರು ಆಗಮಿಸಲಿದ್ದಾರೆ. ವಕೀಲ ಮಹೇಶ ಹಾರೋಗೇರಿ ಉಪನ್ಯಾಸ ನೀಡಲಿದ್ದಾರೆ ಎಂದು ಸಂಘದ ಪ್ರಕಟಣೆ ತಿಳಿಸಿದೆ.

**ಕಾಲ್ನಡಿಗೆ ಜಾಥಾ ಕಾರ್ಯಕ್ರಮದಲ್ಲಿ ಜಿಲ್ಲಾ ಪೋಲೀಸ್ ವರಿಷ್ಠಾಧಿಕಾರಿ ಡಾ. ಗೋಪಾಲ ಎಂ.ಬ್ಯಾಕೋಡ**

## ರಸ್ತೆ ಸುರಕ್ಷತಾ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಿ

■ **ವಿಜಯಸಾಕ್ಷಿ ಸುದ್ದಿ, ಧಾರವಾಡ**

ಸಾರ್ವಜನಿಕರು ರಸ್ತೆಯಲ್ಲಿ ವಾಹನ ಚಾಲನೆ ಮಾಡುವಾಗ ರಸ್ತೆ ಸುರಕ್ಷತಾ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಿದಲ್ಲಿ ರಸ್ತೆ ಅಪಘಾತಗಳನ್ನು ತಡೆಗಟ್ಟಬಹುದಾಗಿದೆ.

ಚಾಲಕರು ತಮ್ಮ ಹಾಗೂ ತಮ್ಮ ಸಂಗಡಿಗ ಸವಾರರ ಸುರಕ್ಷಿತೆ ಬಗ್ಗೆ ಕಾಳಜಿ ವಹಿಸಿ, ವಾಹನ ಚಲಾಯಿಸಬೇಕು. ಜಾಗೃತಿ ಮೂಡಿಸಲು ಪೊಲೀಸ್ ಹಾಗೂ ಪ್ರಾದೇಶಿಕ ಸಾರಿಗೆ ಇಲಾಖೆಗಳಿಂದ ಅನೇಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಗೋಪಾಲ ಎಂ.ಬ್ಯಾಕೋಡ ಹೇಳಿದರು.

ಅವರು ಮಂಗಳವಾರ ಬೆಳಿಗ್ಗೆ ಜಿಲ್ಲಾಡಳಿತ, ಸಾರಿಗೆ ಇಲಾಖೆ, ಕರ್ನಾಟಕ ರಾಜ್ಯ ರಸ್ತೆ ಸುರಕ್ಷತಾ ಪ್ರಾಧಿಕಾರ (ಹುಬ್ಬಳ್ಳಿ–ಧಾರವಾಡ), ಮೋಟಾರು ಡ್ರೈವಿಂಗ್ ಅಸೋಸಿಯೇಷನ್, ಧಾರವಾಡ ಜಿಲ್ಲೆಯ ವಾಹನಗಳ ಅಧಿಕೃತ ಮಾರಾಟಗಾರರು ಹಾಗೂ ಕರ್ನಾಟಕ ವಿಶ್ವವಿದ್ಯಾಲಯ, ಎನ್.ಎಸ್.ಎಸ್. ಕೋಶ, ಶಿಕ್ಷಣ ಮಹಾವಿದ್ಯಾಲಯದ ಎನ್.ಎಸ್.ಎಸ್. ಘಟಕ ಮತ್ತು ಸರ್ ಸಿದ್ದಪ್ಪ ಕಂಬಳಿ ಕಾನೂನು ಮಹಾವಿದ್ಯಾಲಯದ ಸಹಯೋಗದಲ್ಲಿ ಕೆ.ಸಿ.ಡಿ ವೃತ್ತದಿಂದ ಜುಬಿಲಿ ಸರ್ಕಲ್‌ವರೆಗೆ ಆಯೋಜಿಸಿದ್ದ ಕಾಲ್ನಡಿಗೆ (ವಾಕ್‌ತಾನ್) ಜಾಥಾ ಕಾರ್ಯಕ್ರಮಕ್ಕೆ ಚಾಲನೆ ನೀಡಿ, ಮಾತನಾಡಿದರು.




> ಕರ್ನಾಟಕ ವಿಶ್ವವಿದ್ಯಾಲಯದ ಕುಲಸಚಿವ ಡಾ. ಎ. ಚನ್ನಪ್ಪ ಮಾತನಾಡಿ, ವಿದ್ಯಾರ್ಥಿಗಳು ಹಾಗೂ ಪೋಷಕರು ರಸ್ತೆ ಸುರಕ್ಷತೆಯ ಬಗ್ಗೆ ತಿಳುವಳಿಕೆ ಮೂಡಿಸುವುದೇ ಈ ಕಾರ್ಯಕ್ರಮದ ಉದ್ದೇಶವಾಗಿದೆ. ಪ್ರಸ್ತುತ ಪ್ರತಿಯೊಂದು ಮನೆಯಲ್ಲಿ ಕಾರ್ ಅಥವಾ ಬೈಕ್ ಇದ್ದು, ಪೋಷಕರು ತಮ್ಮ ಮಕ್ಕಳಿಗೆ ಅಪ್ರಾಪ್ತ ವಯಸ್ಸಿನಲ್ಲಿ ಬೈಕ್ ಚಾಲನೆಗೆ ಪ್ರಚೋದನೆ ನೀಡಿದಲ್ಲಿ ಅಪಘಾತಗಳಾಗುವ ಸಂಭವವಿರುತ್ತದೆ. ಆದ್ದ–ರಿಂದ ಎಲ್ಲಾ ವಿದ್ಯಾರ್ಥಿಗಳು ರಸ್ತೆಯ ನಿಯಮಗಳನ್ನು ಪಾಲಿಸಿ ರಸ್ತೆ ಅಪಘಾತಗಳನ್ನು ತಡೆಯುವಲ್ಲಿ ಕಾಳಜಿವಹಿಸಬೇಕೆಂದು ತಿಳಿಸಿದರು.

ನಗರದಲ್ಲಿ ಬೇರೆ ರೀತಿಯಾದ ಸನ್ನಿವೇಶ ಹಾಗೂ ಬೇರೆ ಬೇರೆಯಾದ ಪ್ರಕರಣಗಳಲ್ಲಿ ಸಂಭವಿಸುವ ಸಾವಿನ ಸಂಖ್ಯೆಗಳಿಗಿಂತ ಅಪಘಾತದಿಂದ ಮರಣ ಹೊಂದಿರುವವರ ಸಂಖ್ಯೆಯು ಹೆಚ್ಚಾಗಿರುತ್ತದೆ. ಆದ್ದ–ರಿಂದ ರಸ್ತೆಯಲ್ಲಿ ವಾಹನ ಸಂಚಾರ ಮಾಡುವಾಗ ರಸ್ತೆ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಿ, ಅಪಘಾತಗಳನ್ನು ತಪ್ಪಿಸುವಲ್ಲಿ ಇಲಾಖೆಗಳೊಂದಿಗೆ ಸಾರ್ವಜನಿಕರು ಕೈಜೊಡಿಸಬೇಕೆಂದು ತಿಳಿಸಿದರು. ಸಂಚಾರಿ ನಿಯಮಗಳನ್ನು ಪಾಲಿಸುವದರಿಂದ ಜೀವ ರಕ್ಷಣೆ ಆಗುತ್ತದೆ, ಇತರರನ್ನು ಅಪಘಾತದಿಂದ ತಪ್ಪಿಸಬಹುದಾಗಿದೆ. ಅಪ್ರಾಪ್ತರಿಗೆ ಪಾಲಕರು ವಾಹನಗಳನ್ನು ಚಲಾಯಿಸಲು ನೀಡಬಾರದು. ಹೆಲ್ಮೆಟ್, ಸೀಟ್ ಬೆಲ್ಟ್ ಧಾರಣೆ ಸೇರಿದಂತೆ ಅಗತ್ಯ ಸುರಕ್ಷಾ ಕ್ರಮಗಳನ್ನು ಅನುಸರಿಸಬೇಕೆಂದು ಅವರು ಹೇಳಿದರು.

▶▶ 3ನೇ ಪುಟಕ್ಕೆ

ಆಂಗ್ಲೋ ಉರ್ದು ಪ್ರೌಢಶಾಲೆಯಲ್ಲಿ ಎಸ್.ಎಸ್.ಎಲ್.ಸಿ. ವಿದ್ಯಾರ್ಥಿಗಳಿಗೆ ಬಿಳ್ಕೊಡುಗೆ ಸಮಾರಂಭ

# ವಿದ್ಯೆಯಿಂದಲೇ ಸಾಧನೆ ಸಾಧ್ಯ



■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಆಂಗ್ಲೋ ಉರ್ದು ಬಾಲಕ/ಬಾಲಕಿಯರ ಪ್ರೌಢಶಾಲೆಯಲ್ಲಿ ಎಸ್.ಎಸ್.ಎಲ್.ಸಿ. ವಿದ್ಯಾರ್ಥಿಗಳಿಗೆ ಬೀಳ್ಕೊಡುಗೆ ಸಮಾರಂಭ ಹಮ್ಮಿಕೊಳ್ಳಲಾಗಿತ್ತು.

ಹಾಜಿ ಜನಾಬ ಸರ್ಫರಾಜ ಅಹ್ಮದ ಎಸ್.ಉಮಚಗಿಯವರು ಸಮಾರಂಭದ ಅಧ್ಯಕ್ಷತೆಯನ್ನು ವಹಿಸಿ ಮಾತನಾಡುತ್ತಾ, ಇಂದಿನ ಮಕ್ಕಳೇ ನಾಳಿನ ನಾಗರಿಕರು. ಆದ್ದರಿಂದ ಮಕ್ಕಳು ವಿದ್ಯಾಭ್ಯಾಸದ ಕಡೆ ಗಮನ ಹರಿಸಬೇಕು. ವಿದ್ಯೆ ಇದ್ದರೆ ಮಾತ್ರ ಭವಿಷ್ಯದಲ್ಲಿ ಏನಾದರೂ ಸಾಧನೆ ಮಾಡಲು ಸಾಧ್ಯ. 10ನೇ ತರಗತಿಗೆ ಮಾತ್ರ ವಿದ್ಯಾಭ್ಯಾಸ ಸೀಮಿತವಾಗಬಾರದು. ಉನ್ನತ ಶಿಕ್ಷಣ ಪಡೆಯುವವರೆಗೆ ಅಭ್ಯಾಸ ಮಾಡಬೇಕು ಹಾಗೂ ಮೌಲ್ಯಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದರು.

ನಂತರ 2023–24ನೇ ಸಾಲಿನ ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಪ್ರಥಮ, ದ್ವಿತೀಯ, ತೃತೀಯ ಸ್ಥಾನ ಪಡೆದ ವಿದ್ಯಾರ್ಥಿಗಳಿಗೆ ನಗದು ಪುರಸ್ಕಾರವನ್ನು ವಿತರಿಸಿದರು.

ಇಂಗ್ಲಿಷ್ ವಿಷಯದ ರಾಜ್ಯ ಸಂಪನ್ಮೂಲ ವ್ಯಕ್ತಿಗಳಾದ ಫರಹತ ಜಲಗೇರಿ ಮಾತನಾಡಿ, ಗುರಿ ಮುಟ್ಟಲು ಸತತ ಪ್ರಯತ್ನ ಹಾಗೂ ತಾಳ್ಮೆ ಅತೀ ಅವಶ್ಯಕವಾಗಿದೆ. ನಾನು ಉರ್ದು ಮಾಧ್ಯಮದಲ್ಲಿ ಕಲಿಯುತ್ತಿದ್ದೇನೆ ಎಂಬ ಕೀಳರಿಮೆ ಮರೆತು ಮುನ್ನಡೆದರೆ ಯಶಸ್ಸು ಖಂಡಿತ ದೊರೆಯುತ್ತದೆ ಎಂದರು.

ಸಂಸ್ಥೆಯ ನಿರ್ದೇಶಕರಾದ ಪ್ರೊ. ಎ.ಎಂ. ಮುಲ್ಲಾ ಮಾತನಾಡಿ, ಮುಂಬರುವ ಎಸ್.ಎಸ್.ಎಲ್.ಸಿ. ವಾರ್ಷಿಕ ಪರೀಕ್ಷೆಯಲ್ಲಿ ಹೆಚ್ಚು ಅಂಕ ಪಡೆಯಲು ನಿರಂತರ ಅಭ್ಯಾಸ ಹಾಗೂ ಜೀವನದಲ್ಲಿ ಒಂದು ನಿರ್ದಿಷ್ಟ ಗುರಿ ಇರಬೇಕು ಎಂದರು.

ಸಂಸ್ಥೆಯ ಉಪಾಧ್ಯಕ್ಷ ಹಾಜಿ ಎ.ಎಂ. ಸೌದಾಗರ, ಕಾರ್ಯದರ್ಶಿ ಜನಾಬ ಎಂ.ಎಂ. ಶೇಖ, ಸದಸ್ಯರುಗಳಾದ ಜನಾಬ ರಾಜೇಸಾಬ ಎಲ್.ಬಾಗಲಕೋಟ, ಜನಾಬ ಶಹನವಾಜ ಎಸ್. ಉಮಚಗಿ, ಪ್ರೊ. ಎ.ಎಂ. ಮುಲ್ಲಾ, ಜನಾಬ ಜಿಲಾನಿ ಉಮಚಗಿ, ಜನಾಬ ಮೊಹ್ಮದ ಇಕ್ಬಾಲ ಹಣಗಿ, ಜನಾಬ ಕೆ.ಎಂ. ಶೇಖ, ಜನಾಬ ಸಯ್ಯದ ಇಸ್ಮಾಯಿಲ ಬಿಜಾಪೂರ, ಜನಾಬ ಮಹ್ಮದಯೂಸೂಫ್ ಎ.ನರಗುಂದ ಮತ್ತು ಆಂಗ್ಲೋ ಉರ್ದು ಬಾಲಕ/ಬಾಲಕಿಯರ ಪ್ರೌಢಶಾಲೆಯ ಮುಖ್ಯೋಪಾಧ್ಯಾಯರು, ಶಾಲಾ ಸಿಬ್ಬಂದಿ ವರ್ಗದವರು, ಎಲ್ಲಾ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಎಲ್.ಆರ್. ಇಟಗಿ ಸ್ವಾಗತಿಸಿದರು. ವಿದ್ಯಾರ್ಥಿನಿ ತಬಸ್ಸುಮ ಎಸ್.ಅಣ್ಣಿಗೇರಿ ನಿರೂಪಿಸಿದರು. ಶಿಕ್ಷಕರಾದ ಟಿ.ಐ. ಕಾಲೇಕಾನ್, ಎಂ.ಎಂ. ಪೀರಜಾದೆಯವರು ವರದಿ ವಾಚನ ಮಾಡಿದರು. ಎಂ.ಎ. ರಿಕಾಟಿ ಹಾಗೂ ಎಂ.ಝುಡ್. ಭಾವಿಕಟ್ಟಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಎಂ.ಎಚ್. ಜಮಾಲಸಾಬನವರ ಪಾರಿತೋಷಕ ವಿತರಣಾ ಕಾರ್ಯಕ್ರಮ ನಡೆಸಿಕೊಟ್ಟರು. ಕೊನೆಗೆ ತಸ್ಲೀಮಬಾನು ಶಿರಹಟ್ಟಿ ವಂದಿಸಿದರು.

ತೋಂಟದಾರ್ಯ ಇಂಜಿನಿಯರಿಂಗ್ ಕಾಲೇಜಿನ ಪ್ರೊ. ತಹಸೀನ ಶಿಗ್ಲಿ ಮಾತನಾಡಿ, ಸರ್ವಶಕ್ತನ ಮೇಲೆ ಸಂಪೂರ್ಣ ಆತ್ಮವಿಶ್ವಾಸ, ತಂದೆ–ತಾಯಿಯ ಸೇವೆ, ಶಿಕ್ಷಕರ ಮಾತನ್ನು ತಪ್ಪದೇ ಪಾಲಿಸುವುದು, ಕಾರ್ಯದಲ್ಲಿ ದಕ್ಷತೆ ಇದ್ದರೆ ಯಶಸ್ಸು ಸಾಧಿಸಲು ಸಾಧ್ಯ ಎಂದರು.

# ಮಳಿಗೆಗಳನ್ನು ತೆರೆಯಲು ಆನ್‌ಲೈನ್ ಬುಕಿಂಗ್ ಗೆ ಅವಕಾಶ

■ ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಇಂಟರ್ ನ್ಯಾಶನಲ್ ಟ್ರಾವೆಲ್ ಎಕ್ಸ್ ಪೋ ( ಕೆ ಐ ಟಿ ಇ) ಕಾರ್ಯಕ್ರಮವನ್ನು ಫೆಬ್ರವರಿ 26 ರಿಂದ 28 ರವರೆಗೆ ಬೆಂಗಳೂರು ಇಂಟರ್ ನ್ಯಾಶನಲ್ ಎಕ್ಸಿಬಿಷನ್ ಸೆಂಟರ್ ಬೆಂಗಳೂರು ಇಲ್ಲಿ ಹಮ್ಮಿಕೊಳ್ಳಲಾಗಿದೆ.

ವಿಶೇಷವಾದ ಕಾರ್ಯಕ್ರಮದಲ್ಲಿ ಜಿಲ್ಲೆಯ ಪ್ರಮುಖ ಸ್ಥಳಗಳು ಪ್ರವಾಸೋದ್ಯಮ ಉತ್ಪನ್ನಗಳು ಮತ್ತು ಸೇವೆಗಳು ಸಾಂಸ್ಕೃತಿಕ ಪರಂಪರೆ, ಅನನ್ಯ ಪರಂಪರೆಗಳನ್ನು ಬಿಂಬಿಸುವಂತಹ ಪ್ರವಾಸಿ ಯೋಜನೆಗಳನ್ನು ಪ್ರಚುರ ಪಡಿಸಿ ಈ ಕಾರ್ಯಕ್ರಮದ ಸದುಪಯೋಗ ಪಡೆದುಕೊಳ್ಳಲು ಹಾಗೂ ಈ ಕಾರ್ಯಕ್ರಮದಲ್ಲಿ ಸಕ್ರಿಯವಾಗಿ ಪಾಲ್ಗೊಂಡು ಕಾರ್ಯಕ್ರವನ್ನು ಯಶಸ್ವಿಗೊಳಿಸಲು ಜಿಲ್ಲೆಯ ಎಲ್ಲಾ ಆಸಕ್ತ ಪ್ರವಾಸೋದ್ಯಮ ಪಾಲುದಾರರು, ಸ್ಥಳೀಯ ರೇಸಾರ್ಟ್ ಮಾಲೀಕರು, ಈ ಕಾರ್ಯಕ್ರಮದಲ್ಲಿ ಭಾಗವಹಿಸಲು ನಿರ್ದೇಶಕರು, ಪ್ರವಾಸೋದ್ಯಮ ಇಲಾಖೆ, ಬೆಂಗಳೂರು ಮನವಿ ಮಾಡಿದ್ದಾರೆ.

ಕರ್ನಾಟಕ ಇಂಟರ್ ನ್ಯಾಶನಲ್ ಟ್ರಾವೆಲ್ ಎಕ್ಸಪೋ ( ಕೆ ಐ ಟಿ ಇ) ಕಾರ್ಯಕ್ರಮವನ್ನು ಫೆಬ್ರವರಿ 26 ರಿಂದ 28 ರವರೆಗೆ ನಡೆಯುವ ಕಾರ್ಯಕ್ರಮಕ್ಕೆ ಮಳಿಗೆಗಳನ್ನು ತೆರೆಯಲು ಮೊದಲು ಆನ್‌ಲೈನ್ ಬುಕಿಂಗ್ ಅನ್ನು ಮಾಡಬೇಕಾಗಿದೆ. ( ಖಣಚಿಟಟ ಛಿಂಂಇಖಟಿಂ ಽ ಂಟಿಟುಟಟಿಜ: ಡಿಜಝಣಜಡಿ.ಇಚಿಡಿಟಚಿಣಚಿಇಚಿಣಡಿಚಿತಜಟಜಥರಿಂ. ಂಡಿಂ/ಣಜಥಿ) ಇದಕ್ಕೆ ಸಂಬಂಧಿಸಿದಂತೆ 4 ರೀತಿಯಲ್ಲಿ ಮಳಿಗೆಗಳನ್ನು ತೆರೆಯಲು ಅವಕಾಶವಿರುತ್ತದೆ. ಈ ಸಂಬಂಧ ತಮ್ಮ ಹೋಟೆಲ್‌ಗಳ ಬಗ್ಗೆ ದೇಶ ವಿದೇಶಗಳಿಂದ ಬಂದಿರುವಂತಹ ಮಾಲೀಕರಿಗೆ ಮಾಹಿತಿ ನೀಡಿ ಪ್ರವಾಸೋದ್ಯಮವನ್ನು ಉತ್ತೇಜಿಸಲು ಸಹಕಾರಿಯಾಗುವುದು. ಈ ಹಿನ್ನೆಲೆಯಲ್ಲಿ ಮಳಿಗೆಗಳನ್ನು ತೆರೆಯಲು ಕೋರಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ಕೋಟ್ರೇಶ್ವರ ವಿಭೂತಿ. ಸಹಾಯಕ ನಿರ್ದೇಶಕರು, ಪ್ರವಾಸೋದ್ಯಮ ಇಲಾಖೆ ಎ. ಸಿ. ಕಚೇರಿ ಕಟ್ಟಡ ಮುಳಗುಂದ ನಾಕಾ, ಗದಗ ಜಿಲ್ಲೆ ಗದಗ– 9844269430 ರವರನ್ನು ಸಂಪರ್ಕಿಸುಂತೆ ಹಾಗೂ ಜಿಲ್ಲೆಯ ಎಲ್ಲಾ ಆಸಕ್ತ ಪ್ರವಾಸೋದ್ಯಮ ಪಾಲುದಾರರು , ಸ್ಥಳೀಯ ರೇಸಾರ್ಟ್ ಮಾಲೀಕರು, ಉದ್ಯಮದಾರರು, ಹೋಟಲ್ ಮಾಲೀಕರು, ಹೋಮ್ ಸ್ಟೇ ಮಾಲೀಕರು, ಇದರ ಸದುಪಯೋಗ ಪಡೆದುಕೊಳ್ಳಲು ಜಿಲ್ಲಾಧಿಕಾರಿಗಳು ಹಾಗೂ ಅಧ್ಯಕ್ಷರು, ಜಿಲ್ಲಾ ಪ್ರವಾಸೋದ್ಯಮ ಅಭಿವೃದ್ಧಿ ಸಮಿತಿ ಗದಗ ಇವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಇಂದು ಛತ್ರಪತಿ ಶಿವಾಜಿ ಮಹಾರಾಜರ ಜಯಂತಿ ಆಚರಣೆಯ ನಿಮಿತ್ತ ಲೇಖನ

# ಸ್ವರಾಜ್ಯ ಸಂಕಲ್ಪದ ಕ್ಷಾತ್ರ ತೇಜ ಶಿವಾಜಿ

ಯಾವ ಪುಣ್ಯಭೂಮಿಯಲ್ಲಿ ಸ್ತ್ರೀಯರನ್ನು, ಗೋಮಾತೆಯನ್ನು ಪೂಜ್ಯ ಭಾವನೆಯಿಂದ ಕಾಣಲಾಗುತ್ತಿತ್ತೋ ಅಂತಹ ಭೂಮಿಯಲ್ಲಿ ವಿದೇಶಿಯರ ಅಕ್ರಮಣ, ಮತಾಂತರ, ದುರಾಡಳಿತಗಳು ನಡೆಯುತ್ತಿದ್ದಾಗ ಅವುಗಳ ವಿರುದ್ಧ ಸಿಡಿದೆದ್ದು ಸ್ವದೇಶಿ ಬಾಂಧವರಿಗೆ ತಮ್ಮತನದ ಅರಿವನ್ನು ಮೂಡಿಸಿ ಧರ್ಮ ಜಾಗೃತಿಗೊಳಿಸಿದ ಕೀರ್ತಿ ಛತ್ರಪತಿ ಶಿವಾಜಿಗೆ ಸಲ್ಲುತ್ತದೆ. ಬಾಲ್ಯದಲ್ಲಿಯೇ ಸ್ವರಾಜ್ಯದ ದೃಢ ಸಂಕಲ್ಪ ತೊಟ್ಟ ವೀರ, ಕ್ಷಾತ್ರ ತೇಜದ ಬೆಳಕು ಪಸರಿಸಿದ ಹಿಂದವಿಯ ಸೂರ್ಯ ಛತ್ರಪತಿ ಶಿವಾಜಿಯು ಹಿಂದುತ್ವ ರಕ್ಷಕ, ರಾಷ್ಟ್ರಪ್ರೇಮಿ, ನ್ಯಾಯವಂತ, ಜವಾಬ್ದಾರಿಯುತ, ದಕ್ಷ ಆಡಳಿತಗಾರನಾಗಿದ್ದನು. ಸಾಮ್ರಾಜ್ಯ ತನಗಾಗಿ ಅಲ್ಲ, ಜನಹಿತಕ್ಕಾಗಿ ಎಂಬುದು ಶಿವಾಜಿಯ ವಿಚಾರಧಾರೆಯಾಗಿತ್ತು. ಕತ್ತಿಗಾಗಿ ಕತ್ತಿ ಇವನ ಸೂತ್ರವಾಗಿತ್ತು.

ಇಂತಹ ಸದೃಢ ಶಿಸ್ತು ಸೇನೆಯ ಹೊಂದಿದ ಶಿವಾಜಿ ಮಹಾರಾಜರ ಆಡಳಿತವು ಬಹಳ ಗಮನಾರ್ಹವಾಗಿತ್ತು. ಛತ್ರಪತಿ ಶಿವಾಜಿ ಮಹಾರಾಜರು ಹೀಗೆ ಅನೇಕ ಮೊಘಲರ ವಶದಲ್ಲಿರುವ ಕೋಟೆಗಳನ್ನು ವಶಪಡಿಸಿಕೊಂಡು. ಸ್ವರಾಜ್ಯ ಸಂಸ್ಥಾಪನೆಯ ಮೂಲಕ ತಮ್ಮ ತಾಯಿ ಜೀಜಾಬಾಯಿಯ ಕನಸು ನನಸು ಮಾಡಿದರು.

ಶಿವಾಜಿಯು ಶಿವನೇರಿ ದುರ್ಗದಲ್ಲಿ ಕ್ರಿ.ಶ. 1630ರಲ್ಲಿ ಪುಣೆಯ ಶಿವನೇರಿ ದುರ್ಗ ಎಂಬಲ್ಲಿ ಜನಿಸಿದನು. ತಂದೆ ಷಾಜಿ ಭೋಂಸ್ಲೆ, ತಾಯಿ ಜೀಜಾಬಾಯಿ. ಬಾಲ್ಯದಲ್ಲಿಯೇ ಶಿವಾಜಿಗೆ ರಾಮಾಯಣ, ಮಹಾಭಾರತ ಮಹಾಕಾವ್ಯಗಳನ್ನು ತಿಳಿಸುವ ಮೂಲಕ ಮೌಲ್ಯಯುತ ಶಿಕ್ಷಣವನ್ನು ಕಲಿಸಿದಳು. ಶಿವಾಜಿಯ ಗುರು ದಾದಾಜಿ ಕೊಂಡದೇವ ಶಸ್ತ್ರಾಸ್ತ್ರ ವಿದ್ಯೆ ಕಲಿಸಿ ವೀರನ ಮನಸ್ಸನ್ನು ಜಾಗೃತಗೊಳಿಸಿದರು. ಹಿಂದೂ ಧರ್ಮ ಪುನರುಜ್ಜೀವನಗೊಳಿಸಿ ಹೈಂಧವೀ ಸ್ವರಾಜ್ಯ ಕಟ್ಟಬೇಕೆಂಬ ಆಕಾಂಕ್ಷೆಯಿಂದ ಮರಾಠಾ ಮುಖಂಡರನ್ನು ಮತ್ತು ಪಶ್ಚಿಮ ಘಟ್ಟಗಳ ಮಾವಳರೆಂಬ ದೃಢಕಾಯದ ಗಿರಿಜನರನ್ನು ಸೇರಿಸಿ ತರುಣರ ಪಡೆಯನ್ನು ಕಟ್ಟಿದನು. ಶಿವಾಜಿಯು ಸಂತ ರಾಮದಾಸರ ಪರಮ ಭಕ್ತನಾಗಿದ್ದನು.

ದೇವಿ ಅಂಬಾಭವಾನಿಯಿಂದ ಅನುಗ್ರಹಿತನಾಗಿದ್ದ ಶಿವಾಜಿಯು ಶಸ್ತ್ರಾಸ್ತ್ರಗಳಲ್ಲಿ ಅಪ್ರತಿಮ ವೀರನಾಗಿದ್ದನು. ಅವನು ತನ್ನ 19ನೇ ವಯಸ್ಸಿನಲ್ಲಿ ತೋರಣ ದುರ್ಗವನ್ನು ವಶಪಡಿಸಿಕೊಂಡು, ನಂತರ ರಾಯಗಡ( ಕ್ರಿ.ಶ.1646), ಚಾಕಣ್, ಸಿಂಹಗಡ, ಪುರಂದರಗಡವನ್ನು ವಶಪಡಿಸಿಕೊಂಡನು. ಈ ಎಲ್ಲಾ ಪ್ರದೇಶಗಳೂ ಬಿಜಾಪುರ ಸುಲ್ತಾನರ ಸುಲ್ತಾನ ಸಾಮ್ರಾಜ್ಯದ ವ್ಯಾಪ್ತಿಯೊಳಗಿತ್ತು. ಕ್ರಿ.ಶ. 1656ರಲ್ಲಿ ಶಿವಾಜಿಯು ಕೊಂಕಣ ಪ್ರದೇಶದ ಕಲ್ಯಾಣ, ಜಾವಳಿ ಕೋಟೆಯ ಪ್ರದೇಶಗಳನ್ನು ವಶಪಡಿಸಿಕೊಂಡನು. ಶಿವಾಜಿಯ ದಾಳಿಗಳು ಬಿಜಾಪುರ ಸುಲ್ತಾನನಿಗೆ ಕೋಪ ತರಿಸಿತು. ಶಿವಾಜಿಯನ್ನು ನಿಗ್ರಹಿಸಲು ಕ್ರಿ.ಶ. 1659ರಲ್ಲಿ ತನ್ನ ದಂಡನಾಯಕ ಅಫಜಲಖಾನನ ನೇತೃತ್ವದಲ್ಲಿ



ಬಹುದೊಡ್ಡ ಸೈನ್ಯವನ್ನು ಕಳುಹಿಸಿದನು. ಪ್ರತಾಪಗಡದ ಬಳಿಯ ವಾಯಿ ಎಂಬಲ್ಲಿ ಶಿವಾಜಿಯು ಅಫ್‌ಜಲಖಾನನನ್ನು ಮಾತುಕತೆಗೆ ಕರೆದು ಉಪಾಯದಿಂದ ಕೊಂದನು.

ಶಿವಾಜಿಯ ಆಡಳಿತದಲ್ಲಿ ಸಹಾಯ ಮಾಡಲು ಅಷ್ಟಪ್ರಧಾನರೆಂಬಎಂಟು ಜನ ಮಂತ್ರಿಗಳ ಒಂದು ಮಂಡಳಿಯಿದ್ದು, ಮುಖ್ಯಮಂತ್ರಿಯನ್ನು ಪೇಶ್ವೆ ಎಂದು ಕರೆಯಲಾಗುತ್ತಿತ್ತು. ಭೂ ಕಂದಾಯವೇ ರಾಜ್ಯದ ಪ್ರಮುಖ ಆದಾಯವಾಗಿತ್ತು. ರೈತರೇ ನೇರವಾಗಿ ತೆರಿಗೆಯನ್ನು ಸರ್ಕಾರಕ್ಕೆ ಸಲ್ಲಿಸುವ ಪದ್ಧತಿ ರೂಢಿಯಲ್ಲಿತ್ತು. ಅಧಿಕಾರಿಗಳಿಗೆ ವೇತನವನ್ನು ಹಣ ರೂಪದಲ್ಲಿ ನೀಡಲಾಗುತ್ತಿತ್ತು. ಜಾಗೀರು ನೀಡುತ್ತಿರಲಿಲ್ಲ. ಉದ್ಯೋಗ ನೇಮಕಾತಿಯಲ್ಲಿ ಅರ್ಹತೆಯೇ ಮಾನದಂಡವಾಗಿತ್ತು. ಶಿವಾಜಿಯು ಕಟ್ಟುನಿಟ್ಟಿನ ಆಡಳಿತ ಪದ್ಧತಿಯನ್ನು ಜಾರಿಗೆ ತಂದಿದ್ದನು. ಶತ್ರುಗಳ ಸ್ತ್ರೀಯರನ್ನು ಸಹ ಗೌರವಿಸುತ್ತಿದ್ದನು. ಸ್ವರಾಜ್ಯಕ್ಕೆ ಶಕ್ತಿ ನೀಡುವ ಮುಖ್ಯ ಅಂಶವೆಂದರೆ ಗುಣವಂತರನ್ನು ಗುರುತಿಸಿ ಅವರ ಕಾರ್ಯದಕ್ಷತೆ, ನಿಷ್ಠೆ, ಪ್ರಾಮಾಣಿಕತೆ ಪರಿಗಣಿಸಿ ಅವರಿಗೆ ಪ್ರಾಶಸ್ತ್ಯ ನೀಡುವುದು ಆಗಿತ್ತು. ಯಾವುದೇ ಕುಲ, ಜಾತಿ, ಮತ, ಭಾಷೆ ಯಾವುದೇ ಬೇಧಬಾವಗಳನ್ನು ಪರಿಗಣಿಸದೇ ಅವರಿಗೆ ಪುರಸ್ಕರಿಸುತ್ತಿದ್ದನು.

ಮೊಘಲರು ಶಿವಾಜಿಯನ್ನು ಸಂಪೂರ್ಣನಾಶಗೊಳಿಸಲು ಬಿಜಾಪುರದ ಬಾದಶಹನೊಂದಿಗೆ ಕೈಜೋಡಿಸಿದರು. ಕ್ರಿ.ಶ. 1660ರಲ್ಲಿ ಔರಂಗಜೇಬನು ತನ್ನ ಸೇನಾಪತಿ ಶಯಿಸ್ತಾಖಾನನ್ನು ಶಿವಾಜಿಯನ್ನು ಸೋಲಿಸಲು ಕಳುಹಿಸಿದನು. ಶಯಿಸ್ತಾಖಾನನ್ನು ಮರಾಠರ ಕೆಲವು ಕೋಟೆಗಳನ್ನು ಹಾಗೂ ಪುಣೆಯನ್ನು ವಶಪಡಿಸಿಕೊಂಡನು. ಆಗ ಶಿವಾಜಿ ಪುಣೆಯಲ್ಲಿ ಬೀಡುಬಿಟ್ಟಿದ್ದ ಶಯಿಸ್ತಾಖಾನನ ಮೇಲೆ ರಾತ್ರಿ ವೇಳೆ ದಾಳಿ ಮಾಡಿದನು. ನಂತರ ಔರಂಗಜೇಬನು ಕ್ರಿ.ಶ. 1664ರಲ್ಲಿ ತನ್ನ ಸೇನಾನಿ ರಾಜಾಜಯಸಿಂಗನನ್ನು ಶಿವಾಜಿಯನ್ನು ನಿಗ್ರಹಿಸಲು ಕಳುಹಿಸಿದನು. ಜಯಸಿಂಗನು ಶಿವಾಜಿಯ ಅನೇಕ ಕೋಟೆಗಳನ್ನು ವಶಪಡಿಸಿಕೊಂಡಾಗ ಆತನೊಂದಿಗೆ ಕ್ರಿ.ಶ. 1665ರಲ್ಲಿ ಅನಿವಾರ್ಯವಾಗಿ ಪುರಂದರ ಒಪ್ಪಂದ ಮಾಡಿಕೊಂಡು, ಆ ಪ್ರಕಾರ 24 ಕೋಟೆಗಳನ್ನು ಮೊಘಲರಿಗೆ ಬಿಟ್ಟುಕೊಟ್ಟನು.

ರಾಜಾ ಜಯಸಿಂಗನು ಶಿವಾಜಿ ಮನವೊಲಿಸಿ, ಆಗ್ರಾದಲ್ಲಿ ಔರಂಗಜೇಬನನ್ನು ಕಾಣುವಂತೆ ಮಾಡಿದನು. ಆದರೆ ಔರಂಗಜೇಬನು ಇವನನ್ನು ಸರಿಯಾಗಿ ನಡೆಸಿಕೊಳ್ಳದೇ ಸೆರೆಯಲ್ಲಿಟ್ಟನು. ಆಗ್ರಾ ಬಂದೀಖಾನೆಯಿಂದ ಬುದ್ಧಿವಂತ ಶಿವಾಜಿಯು ಉಪಾಯದಿಂದ ಪಾರಾದನು. ನಂತರ ಎರಡು ವರ್ಷಗಳ ಕಾಲ ಶಿವಾಜಿಯು ತಾನು ಕಳೆದುಕೊಂಡಿದ್ದ ಎಲ್ಲಾ ಕೋಟೆಗಳನ್ನು ಪುನಃ ವಶಪಡಿಸಿಕೊಂಡನು. ಕ್ರಿ.ಶ. 1674ರಲ್ಲಿ ರಾಯಗಡದಲ್ಲಿ ಕಿರೀಟಧಾರಣೆ ಮಾಡಿಸಿಕೊಂಡು ಛತ್ರಪತಿ ಎನಿಸಿದನು. ನಂತರ ಇಡೀ ಪಶ್ಚಿಮ ಭಾರತ ಆಡಳಿತವನ್ನು ಏಕೀಕರಿಸಿದನು. ಶಿವಾಜಿಯು ಕ್ರಿ.ಶ. 1680ರಲ್ಲಿ ಮರಣಹೊಂದಿದನು.

ಶಿವಾಜಿ ಮಹಾರಾಜರ ತತ್ವಾದರ್ಶಗಳು ಸಾರ್ವಕಾಲಿಕವಾಗಿವೆ. ಇವರ ಆದರ್ಶಗಳನ್ನು ಪ್ರತಿಯೊಬ್ಬರೂ ಅನುಸರಿಸಬೇಕು. ಶಿವಾಜಿಯಂತಹ ವೀರಪುತ್ರರು ಈ ಪುಣ್ಯಭೂಮಿಯಲ್ಲಿ ಪ್ರತಿಯೊಬ್ಬರ ಮನೆ ಮನೆಗಳಲ್ಲಿ ಜನಿಸಬೇಕು. ಇಂದಿನ ತಾಯಂದಿರು ಮಾತೆ ಜೀಜಾಬಾಯಿಯ ಆದರ್ಶಗಳನ್ನು ಅನುಸರಿಸಿ ತಮ್ಮ ಮಕ್ಕಳನ್ನು ಸಂಸ್ಕಾರವಂತ ಹಾಗೂ ದೇಶಭಕ್ತರನ್ನಾಗಿಸುವ ಅವಶ್ಯಕತೆ ಇದೆ.

**– ಅಂಜನಾ ರಾಘವೇಂದ್ರ ಕುಬೇರ.**
**ವಾರ್ತಾ ಮತ್ತು ಸಾ.ಸಂ. ಇಲಾಖೆ– ಗದಗ.**

ಚನ್ನಮ್ಮನ ಮನೆ ಕಾರ್ಯಕ್ರಮದಲ್ಲಿ ಉಪನ್ಯಾಸ ನೀಡಿದ ಜಿ. ಷಣ್ಮುಖಪ್ಪ

# ಎಲ್ಲರೂ ಒಂದಾಗಿ ಸಮಾಜ ಸಂಘಟನೆ ಮಾಡಿ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಂಚಮಸಾಲಿ ಸಮಾಜದ ಪ್ರಥಮ ಜಗದ್ಗುರುಗಳಾಗಿ, ಸಂಘಟನೆಯ ಮೂಲಕ ಸಮಾಜವನ್ನು ಒಗ್ಗೂಡಿಸಿದ ಕೀರ್ತಿ ಲಿಂಗೈಕ್ಯ ಶ್ರೀ ಮಹಾಂತ ಶಿವಾಚಾರ್ಯ ಮಹಾಸ್ವಾಮಿಗಳಿಗೆ ಸಲ್ಲುತ್ತದೆ ಎಂದು ರಾಜ್ಯ ವೀರಶೈವ ಲಿಂಗಾಯಿತ ಪಂಚಮಸಾಲಿ ಸಂಘದ ರಾಜ್ಯ ಖಜಾಂಚಿ ಹಾಗೂ ನಿವೃತ್ತ ಶಿಕ್ಷಕ ಜಿ. ಷಣ್ಮುಖಪ್ಪ ಹೇಳಿದರು.

ಅವರು ಪಟ್ಟಣದ ಶೈಲಾ ಆದಿ ಅವರ ನಿವಾಸದಲ್ಲಿ ತಾಲೂಕಾ ವೀರಶೈವ ಲಿಂಗಾಯತ ಪಂಚಮಸಾಲಿ ಸಂಘದ ವತಿಯಿಂದ ಪ್ರತಿ ತಿಂಗಳು ಸೋಮವಾರ ನಡೆಯುವ ಚನ್ನಮ್ಮನ ಮನೆ ಕಾರ್ಯಕ್ರಮದಲ್ಲಿ ಉಪನ್ಯಾಸ ನೀಡಿ ಮಾತನಾಡಿದರು.

ಲಿಂಗೈಕ್ಯ ಶ್ರೀಗಳ ಜೀವನ, ಆದರ್ಶ, ಸಂಘಟನೆ ಶಕ್ತಿ ಸ್ಮರಿಸಿದ ಅವರು, ಶ್ರೀಗಳು ಎಂದಿಗೂ ವಿಶ್ರಾಂತಿ ಲೆಕ್ಕಿಸದೆ ಸಮಾಜ ಸೇವೆಗೆ ತಮ್ಮ ಜೀವ ಮುಡಿಪಿಟ್ಟಿದ್ದರು. ಲಿಂ.ಶ್ರೀಗಳು ಪಂಚಮಸಾಲಿ ಪೀಠವು ಕೇವಲ ಒಂದು ಸಮಾಜಕ್ಕೆ ಮಾತ್ರ ಸೀಮಿತವಾಗದೆ




ಎಲ್ಲರನ್ನೂ ಒಗ್ಗೂಡಿಸಿಕೊಂಡು ಧಾರ್ಮಿಕವಾಗಿ ಸಾಮಾಜಿಕವಾಗಿ ಸಂಘಟಿತರಾಗುವಂತೆ ಮಾಡಿದ್ದರು. ಎಲ್ಲರೊಂದಿಗೆ ಸರಳವಾಗಿ ಬೆರೆಯುವ ಎಲ್ಲರನ್ನೂ ಪ್ರೀತಿ ವಿಶ್ವಾಸದಿಂದ ಕಾಣುವ ಲಿಂ. ಶ್ರೀಗಳು ಸಾಕಷ್ಟು ಭಕ್ತರನ್ನು ಹೊಂದಿದ್ದು, ಅವರಿಗೆ ಭಕ್ತಿ–ವಿಶ್ವಾಸದಿಂದ ನಡೆದುಕೊಂಡ ಭಕ್ತರಿಗೆ ಅನುಗ್ರಹ ನೀಡಿದ್ದಾರೆ. ಅಪಾರ ಮಹಿಮೆಯನ್ನು ಹೊಂದಿದ್ದ ಶ್ರೀಗಳ ಇಚ್ಛೆಯಂತೆ ಎಲ್ಲರೂ ಒಂದಾಗಿ ಸಮಾಜ ಸಂಘಟನೆ ಮಾಡುವಂತೆ ಸಲಹೆ ನೀಡಿದರು.

ಕಾರ್ಯಕ್ರಮವನ್ನು ಸಮಾಜದ ಮುಖಂಡರಾದ ಶೈಲಾ ಆದಿ ಉದ್ಘಾಟಿಸಿದರು. ಸಂಘದ ತಾಲೂಕಾಧ್ಯಕ್ಷ ಮಂಜುನಾಥ ಮಾಗಡಿ ಅಧ್ಯಕ್ಷತೆ ವಹಿಸಿದ್ದರು. ಸೋಮಶೇಖರ ಕೆರಿಮನಿ ಪ್ರಾಸ್ತಾವಿಕವಾಗಿ ಮಾತನಾಡಿದರು. ನಿವೃತ್ತ ಶಿಕ್ಷಕ,

ಹಿರಿಯ ಮುಖಂಡ ಚನ್ನಪ್ಪ ಕೋಲಕಾರ ಮಾತನಾಡಿ, ಧೀರ, ದಿಟ್ಟ ಮಹಿಳೆಯಾಗಿದ್ದ ಕಿತ್ತೂರು ಚನ್ನಮ್ಮ ಅವರು ಪಂಚಮಸಾಲಿ ಸಮಾಜದವರು ಎನ್ನುವದು ಹೆಮ್ಮೆಯ ವಿಷಯವಾಗಿದೆ. ಅವರನ್ನು ಜಾತಿಗೆ ಸೀಮಿತಗೊಳಿಸುವದು ಬೇಡ, ದೇಶ ರಕ್ಷಣೆಗೆ ಪ್ರಾಣದ ಹಂಗು ತೊರೆದು ಹೋರಾಡಿದ ಚನ್ನಮ್ಮ ಎಲ್ಲ ಸಮಾಜದವರಿಗೂ ಶ್ರೇಷ್ಠಳಾಗಿದ್ದಾಳೆ ಎಂದರು.

ಮಕ್ಕಳ ಸಾಹಿತಿ ಪೂರ್ಣಾಜಿ ಖರಾಟೆ ಮಾತನಾಡಿದರು. ಕಾರ್ಯಕ್ರಮದಲ್ಲಿ ಶಿವಣ್ಣ ಬಂಕಾಪುರ, ಎಮ್.ಆರ್. ಪಾಟೀಲ, ಡಿ.ಎಮ್. ಪೂಜಾರ, ಪಂಚಮಸಾಲಿ ಸಂಘದ ರಾಜ್ಯ ಮಹಿಳಾ ಘಟಕದ ಉಪಾಧ್ಯಕ್ಷೆ ಮಾಲಾದೇವಿ ದಂದರಗಿ, ತಾಲೂಕಾಧ್ಯಕ್ಷೆ ಶಾರದಾ ಮಹಾಂತಶೆಟ್ಟರ, ವೀರೇಂದ್ರಕುಮಾರ ಕಟಗಿ, ಕೋಟೆಗೌಡ್ರ, ಬಸವರಾಜ ಜಾಲಗಾರ, ರಾಜು ಲಿಂಬಿಕಾಯಿ, ಪವನ ಬಂಕಾಪುರ, ಆಭಯ ಜೈನ ಮುಂತಾದವರಿದ್ದರು.

ನಂದಾ ಮಾಳವಾಡ ಪ್ರಾರ್ಥಿಸಿದರು, ಚಂದ್ರು ಮಾಗಡಿ ಕಾರ್ಯಕ್ರಮ ನಿರೂಪಿಸಿದರು.

ಪಂ.ಪಂಚಾಕ್ಷರಿ ಗವಾಯಿಗಳವರ ಶಾಲೆಯ ಸ್ನೇಹ ಸಮ್ಮೇಳನ–ಮಕ್ಕಳ ಹಬ್ಬ

# ಜ್ಞಾನದಾಹಿಗಳಾಗಿ ಜೀವನದಲ್ಲಿ ಯಶಸ್ಸು ಸಾಧಿಸಿ

■ ವಿಜಯಸಾಕ್ಷಿ ಸುದ್ದಿ, ಗದಗ

ಮಕ್ಕಳ ಕಲಿಕಾ ಸಾಮರ್ಥ್ಯಗಳು, ಆಸಕ್ತಿದಾಯಕ ಕ್ಷೇತ್ರಗಳು, ಕಲಿಕಾ ಶೈಲಿ ಹಾಗೂ ಮಗುವಿನ ಅಗತ್ಯಗಳು ಕಲಿಕೆಯ ಮೇಲೆ ನಿರಂತರ ಪ್ರಭಾವ ಬೀರುತ್ತವೆ. ಪಠ್ಯದೊಂದಿಗೆ ಪಠ್ಯೇತರ ಚಟುವಟಿಕೆಗಳು ವಿದ್ಯಾರ್ಥಿಯ ಬೌದ್ಧಿಕ ವಿಕಾಸಕ್ಕೆ ಸಹಕಾರಿ ಎಂದು ಸಂಪನ್ಮೂಲ ವ್ಯಕ್ತಿ ಕವಿತಾ ಬೇಲೇರಿ ಹೇಳಿದರು.

ಅವರು ಗದುಗಿನ ಪಂ.ಪುಟ್ಟರಾಜ ಕವಿ ಗವಾಯಿಗಳವರ ಪ್ರಾಥಮಿಕ ಶಾಲೆಯ ವಾರ್ಷಿಕೋತ್ಸವವನ್ನು ಉದ್ಘಾಟಿಸಿ ಮಾತನಾಡಿದರು.

ವೀರೇಶ್ವರ ಪುಣ್ಯಾಶ್ರಮ ಅಂಧ–ಅನಾಥರ ಬಾಳಿನ ಬಾಗ್ಯದ ಬಾಗಿಲು. ಇಲ್ಲಿ ಹಾಡುವ ಹಕ್ಕಿಗಳು ಸಾವಿರಾರು. ತಮ್ಮ ಬದುಕನ್ನು ಕಟ್ಟಿಕೊಳ್ಳಲು ಮುಕ್ತ ಅವಕಾಶವನ್ನು ಶ್ರೀ ಮಠವು ಎಲ್ಲರಿಗೂ ಕಲ್ಪಿಸಿದ್ದು, ಇಲ್ಲಿ ಜ್ಞಾನಾರ್ಜನೆಗೈಯುತ್ತಿರುವ ಪ್ರತಿಯೊಬ್ಬರೂ ಸುದ್ಯೆವಿಗಳು. ಮಕ್ಕಳು ಜ್ಞಾನದಾಹಿಗಳಾಗಿ ಇಲ್ಲಿ ಸಿಗುವ ಬದುಕಿನ ಎಲ್ಲ ಅನುಭವದ ಪಾಠಗಳನ್ನು ಕಲಿತು ಜೀವನದಲ್ಲಿ ಯಶಸ್ಸು ಸಾಧಿಸಬೇಕು ಎಂದರು.



ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಇ.ಸಿ.ಓ ಐ.ಬಿ. ಮಡಿವಾಳರ ಮಾತನಾಡಿ, ಶಾಲೆಗಳು ಕುಟುಂಬದ ರೀತಿಯಲ್ಲಿ ಮಕ್ಕಳೊಂದಿಗೆ ಸಂಪರ್ಕ ಹೊಂದಿದಾಗ ಅಲ್ಲಿ ಆತ್ಮೀಯತೆಯು ಬೆಸೆದು ಮಕ್ಕಳು ಕಲಿಕೆಯಲ್ಲಿ ಪ್ರಗತಿ ಸಾಧಿಸುವರು ಎಂದರು.

ಸಂಪನ್ಮೂಲ ವ್ಯಕ್ತಿ ಟಿ.ಎಸ್. ಹೂಗಾರ ಮಾತನಾಡಿ, ಶಾಲೆಗಳಲ್ಲಿ ಮಕ್ಕಳ ಬೌದ್ಧಿಕ ವಿಕಾಸ ಹಾಗೂ ಶೈಕ್ಷಣಿಕ ಪ್ರಗತಿಗಾಗಿ ಪಠ್ಯದೊಂದಿಗೆ ಪಠ್ಯೇತರ ಚಟುವಟಿಕೆಗಳಿಗೂ ಹೆಚ್ಚು ಒತ್ತು ನೀಡಲಾಗುತ್ತಿದೆ. ಪ್ರೋತ್ಸಾಹದಾಯಕವಾದ ವಾತಾವರಣ ಮಕ್ಕಳಿ ಸ್ಫೂರ್ತಿ ನೀಡುತ್ತದೆ ಎಂದರು.

ಅತಿಥಿಗಳಾಗಿ ಶಾಲಾ ಆಡಳಿತಾಧಿಕಾರಿ ಪಿ.ಸಿ. ಹಿರೇಮಠ ಹಾಗೂ ಆಡಳಿತ ಮಂಡಳಿಯ ಪ್ರಕಾಶ ಬಸರಿಗಿಡದ, ವೀರೇಶ್ವರ ಪುಣ್ಯಾಶ್ರಮದ ವ್ಯವಸ್ಥಾಪಕ ಹೇಮರಾಜ ಶಾಸ್ತ್ರೀಗಳು ಹಿರೇಮಠ, ಪುರಾಣ ಪ್ರವಚನಕಾರ ಫಕ್ಕೀರಯ್ಯ ಶಾಸ್ತ್ರೀಗಳು ಹಿರೇಮಠ ಆಗಮಿಸಿ ವಿವಿಧ ಸ್ಪರ್ಧೆಗಳಲ್ಲಿ ವಿಜೇತರಾದ ಮಕ್ಕಳಿಗೆ ಬಹುಮಾನದೊಂದಿಗೆ ಪ್ರಶಸ್ತಿಪತ್ರಗಳನ್ನು ವಿತರಿಸಿ ಸಂದರ್ಭೋಚಿತವಗಿ ಮಾತನಾಡಿದರು.

ಪ್ರಾರಂಭದಲ್ಲಿ ಸಂದೀಪ ಹೂಗಾರ ಮತ್ತು ಕುಮಾರೇಶ ಹಿರೇಮಠ ಸಂಗಡಿಗರು ಪ್ರಾರ್ಥಿಸಿದರು. ಶಿಕ್ಷಕ ಸಿದ್ಧಲಿಂಗೇಶ ಕರ್ಜಿಗನೂರ ವರದಿ ವಾಚಿಸಿದರು. ಎ.ಬಿ. ಸೊನ್ನದ ಸ್ವಾಗತಿಸಿದರು. ವಿ.ಎಂ. ವಾಲ್ಮೀಕಿ ಪರಿಚಯಿಸಿದರು. ರೇಣುಕಾ ಪಾಟೀಲ ನಿರೂಪಿಸಿದರು. ಕೊನೆಯಲ್ಲಿ ಎ.ಎಸ್. ಮುನೇನಕೊಪ್ಪ ವಂದಿಸಿದರು. ಕಾರ್ಯಕ್ರಮದಲ್ಲಿ ಮಕ್ಕಳು, ಪಾಲಕ–ಪೋಷಕರಾದ ಪರಶುರಾಮ ಹುಬ್ಬಳ್ಳಿ, ಸಿಕಂದರ ವಾಲೀಕಾರ, ಮಂಜುಳಾ ಜಾಧವ, ಮಲ್ಲಮ್ಮ ಗೌಡರ, ರಜನಿಕಾಂತ ಶಿಲ್ಪಿ, ಕುಮಾರೇಶ ತುಪ್ಪದ, ಶರಣಪ್ಪಗೌಡ ಕರಕನಗೌಡ್ರ, ಮಂಜುನಾಥ ಗೌಡರ, ರುದ್ರಯ್ಯ ಹಿರೇಮಠ ಮುಂತಾದವರಿದ್ದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಶಾಲಾ ಮುಖ್ಯೋಪಾಧ್ಯಾಯ ಕೆ.ಬಿ. ಹಿರೇಮಠ ವಹಿಸಿ ಮಾತನಾಡಿ, ಪ್ರಾಥಮಿಕ ಹಂತವು ಮಗುವಿನ ಭವಿಷ್ಯದ ಅಡಿಗಲ್ಲು. ಈ ಶಾಲೆಯ ಮಕ್ಕಳು ರಾಜ್ಯದ ಮೂಲೆ–ಮೂಲೆಯಿಂದ ಪುಣ್ಯಾಶ್ರಮಕ್ಕೆ ಬಂದು ಇಲ್ಲಿ ವಿದ್ಯಾಭ್ಯಾಸ ಮಾಡುತ್ತಿದ್ದಾರೆ. ಇವರ ಯೋಗಕ್ಷೇಮ–ಶೈಕ್ಷಣಿಕ ಪ್ರಗತಿಯತ್ತ ನಾವೆಲ್ಲರೂ ಗಮನ ಹರಿಸಿ ಮಕ್ಕಳ ಕ್ಷೇಮಾಭಿವೃದ್ಧಿಯನ್ನೇ ನಮ್ಮೆಲ್ಲರ ಗುರಿಯಾಗಿಸಿಕೊಂಡಿದ್ದೇವೆ ಎಂದರು.

# ಸಾರ್ವಜನಿಕರ ಗಮನಕ್ಕೆ

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯ ಗಜೇಂದ್ರಗಡ ಪಟ್ಟಣದ ಸಾರ್ವಜನಿಕರಿಗೆ ತಿಳಿಸುವುದೇನೆಂದರೆ ಗಜೇಂದ್ರಗಡ ಪುರಸಭೆ ವ್ಯಾಪ್ತಿಯಲ್ಲಿ ಬರುವ ಪುರಸಭೆ ಮಾಲ್ಕಿ ನಾಗರೀಕ ಸೌಲಭ್ಯಕ್ಕೆ ಕಾಯ್ದಿರಿಸಿದ ಜಾಗೆಯನ್ನು ರೋಣ ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರ ಕಚೇರಿಗೆ ಮಂಜೂರಿಸಲು ಕರ್ನಾಟಕ ಪುರಸಭೆಗಳ ಅಧಿನಿಯಮಗಳ ಪ್ರಕಾರ ದಿ: 30–9–2024ರಂದು ಜರುಗಿದ ಪುರಸಭೆಯ ಸಾಮಾನ್ಯ ಸಭೆಯ ಠರಾವು ಪ್ರಕಾರ 30 ವರ್ಷದ ಅವಧಿಗೆ ಮೀರದ ಹಾಗೆ ಲೀಸ್ ಆಧಾರದ ಮೇಲೆ ನಿವೇಶನಗಳನ್ನು ಡಾ.ಬಿ.ಆರ್. ಅಂಬೇಡ್ಕರ್ ಭವನ ನಿರ್ಮಾಣ ಮಾಡಲು ನಿವೇಶನ ಹಂಚಿಕೆ ಮಾಡಲು ಸಭೆಯಲ್ಲಿ ನಿರ್ಣಯಿಸಲಾಗಿದೆ. ಈ ಬಗ್ಗೆ ಯಾರಾದರೂ ಸಲಹೆ/ ಸೂಚನೆ / ಆಕ್ಷೇಪಣಗೆಳು ಇದ್ದಲ್ಲಿ ಈ ಪ್ರಕಟಣೆ ಪ್ರಕಟಗೊಂಡ 7 ದಿನಗಳೊಳಗೆ ಲಿಖಿತವಾಗಿ ಗಜೇಂದ್ರಗಡ ಪುರಸಭೆಗೆ ಸಲ್ಲಿಸಬಹುದಾಗಿದೆ ಎಂದು ಗಜೇಂದ್ರಗಡ ಪುರಸಭೆ ಮುಖ್ಯಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರಾಜ್ಯ ಆಯುಕ್ತರ ಗದಗ ಜಿಲ್ಲಾ ಪ್ರವಾಸ

■ವಿಜಯಸಾಕ್ಷಿ ಸುದ್ದಿ, ಗದಗ

ಅಂಗವಿಕಲ ವ್ಯಕ್ತಿಗಳ ಹಕ್ಕುಗಳ ಅಧಿನಿಯಮದ ರಾಜ್ಯ ಆಯುಕ್ತರಾದ ದಾಸ್ ಸೂರ್ಯವಂಶಿ ಅವರು ಫೆಬ್ರವರಿ 20ರಂದು ಗದಗ ಜಿಲ್ಲೆಯಲ್ಲಿ ಪ್ರವಾಸ ಕೈಗೊಳ್ಳುವರು. ಈ ಸಂದರ್ಭದಲ್ಲಿ ವಿಕಲಚೇತನರ ಯೋಜನೆಯಡಿ ಜಿಲ್ಲಾ ಮಟ್ಟದ ಅಧಿಕಾರಿಗಳ ಜೊತೆ ಪ್ರಗತಿ ಪರಿಶೀಲನಾ ಸಭೆ ಹಾಗೂ ಹಲವಾರು ಕಾರ್ಯಕ್ರಮಗಳಲ್ಲಿ ಪಾಲ್ಗೊಳ್ಳಲಿದ್ದಾರೆ ಎಂದು ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ಪ್ರಕಟಣೆ ತಿಳಿಸಿದೆ.

## ಮುಂಜಾನೆಯೇ ವಿವಿಧ ವಾರ್ಡ್‌ಗಳಿಗೆ ಶಾಸಕ ಡಾ. ಚಂದ್ರು ಲಮಾಣಿ ಭೇಟಿ, ಪರಿಶೀಲನೆ

# ಕಸ ವಿಲೇವಾರಿ ಮಾಡಲು ವಿಳಂಬವೇಕೆ?

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದಲ್ಲಿ ಮಂಗಳವಾರ ಬೆಳಗಿನ ಜಾವ ಪುರಸಭೆ ಪೌರಕಾರ್ಮಿಕರು ಸ್ವಚ್ಛತೆ ನಡೆಸುತ್ತಿದ್ದ ಸ್ಥಳಕ್ಕೆ ಶಾಸಕ ಡಾ. ಚಂದ್ರು ಲಮಾಣಿ ದಿಢೀರ್ ಭೇಟಿ ನೀಡಿ, ಕಾರ್ಮಿಕರು ನಡೆಸುತ್ತಿರುವ ಸ್ವಚ್ಛತಾ ಕಾರ್ಯವನ್ನು ಪರಿಶೀಲಿಸಿದರು.

ಮುಂಜಾನೆಯೇ ಶಾಸಕರು ಭೇಟಿ ನೀಡಿದ್ದು ಸಾರ್ವಜನಿಕರಿಗೆ ಆಶ್ಚರ್ಯ ಮೂಡಿಸಿತ್ತು. ಪುರಸಭೆಗೆ ಭೇಟಿ ನೀಡಿ ಚರ್ಚೆ ನಡೆಸಿದ ಅವರು, ಪಟ್ಟಣದ ಬಜಾರ ರಸ್ತೆ, ಮಾರುಕಟ್ಟೆಯ ಪ್ರಾಂಗಣವನ್ನು ವೀಕ್ಷಿಸಿದರು. ಕೆಲವು ಕಡೆಗಳಲ್ಲಿ ಕಸದ ರಾಶಿಯನ್ನು ಕಂಡ ಅವರು, ಇದನ್ನು ವಿಲೇವಾರಿ ಮಾಡಲು ವಿಳಂಬವೇಕೆ ಎಂದು ಅಧಿಕಾರಿಗಳನ್ನು ಪ್ರಶ್ನಿಸಿದರು.

ಪಟ್ಟಣದ ಬಹುತೇಕ ವಾರ್ಡ್‌ಗಳಲ್ಲಿನ ಚರಂಡಿ ಹಾಗೂ ರಸ್ತೆಗಳಲ್ಲಿ ಕಸ ವಿಲೇವಾರಿ ಮಾಡದಿರುವ ಕುರಿತು ಸಾರ್ವಜನಿಕರಿಂದ ದೂರುಗಳು ಬರುತ್ತಿರುವ ಬಗ್ಗೆ ಮುಖ್ಯಾಧಿಕಾರಿಗಳು ವಿಶೇಷ ಗಮನ ಹರಿಸುವಂತೆ ಸೂಚಿಸಿದರು. ಅಲ್ಲದೆ, ಬೇಸಿಗೆಯಾಗಿರುವದರಿಂದ ಕುಡಿಯುವ ನೀರು ಪೂರೈಕೆಯ ಬಗ್ಗೆ ವಿಶೇಷ ನಿಗಾ ವಹಿಸಿ,



ಯಾವುದೇ ಕಾರಣಕ್ಕೂ ನೀರು ಪೂರೈಕೆಯಲ್ಲಿ ಜನರಿಗೆ ತೊಂದರೆಯಾಗದಂತೆ ಕ್ರಮ ತೆಗೆದುಕೊಳ್ಳಿ ಎಂದು ಸಲಹೆ ನೀಡಿದರು.

ನಗರೋತ್ಥಾನ ಕಾಮಗಾರಿ ಅರ್ಧಕ್ಕೆ ನಿಂತಿರುವ ಸ್ಥಳಕ್ಕೆ ಭೇಟಿ ನೀಡಿದ ಶಾಸಕ ಡಾ. ಚಂದ್ರು ಲಮಾಣಿ, ಕಳೆದ ಮೂರು ವರ್ಷಗಳಿಂದ ನಗರೋತ್ಥಾನ ಕಾಮಗಾರಿಗಳು ನಡೆಯುತ್ತಿದ್ದು, ಇನ್ನೂ ಸಹ ಪೂರ್ಣಗೊಳಿಸದಿರುವ ಗುತ್ತಿಗೆದಾರರ ಮೇಲೆ ಕ್ರಮ ತೆಗೆದುಕೊಳ್ಳುವಂತೆ ಜಿಲ್ಲಾಧಿಕಾರಿಗಳಿಗೆ ಹಾಗೂ ಪಿಡಿಓ ಅವರಿಗೆ ಪತ್ರದ ಮೂಲಕ ತಿಳಿಸಲಾಗಿದೆ. ಕಾಮಗಾರಿ ವಿಳಂಬವಾಗಿರುವ ಕುರಿತು ಜಿಲ್ಲಾಧಿಕಾರಿಗಳಿಗೆ ಸರಿಯಾದ ಮಾಹಿತಿ ನೀಡಿ ಎಂದು ಮುಖ್ಯಾಧಿಕಾರಿಗಳಿಗೆ ಸೂಚಿಸಿದರಲ್ಲದೆ, ಆದಷ್ಟು ಶೀಘ್ರ ನಗತೋತ್ಥಾನ ಕಾಮಗಾರಿಗಳು ಮುಗಿಯಬೇಕು ಎಂದು ಹೇಳಿದರು.

ಅಲ್ಲದೆ ಒಳಚರಂಡಿ ಕಾಮಗಾರಿಯೂ ಅಪೂರ್ಣವಾಗಿದೆ. ಆ ವೇಳೆಯಲ್ಲಿ ಅಧಿಕಾರಿಗಳು ಪರಿಶೀಲನೆ ನಡೆಸದೆ ಕಾಮಗಾರಿ ಸಂಪೂರ್ಣವಾಗಿದೆ ಎಂದು ಸರ್ಟಿಫಿಕೇಟ್ ನೀಡಿದ್ದಾರೆ. ಇದರ ಬಗ್ಗೆ ಜಿಲ್ಲಾಧಿಕಾರಿಗಳಿಗೆ ಮಾಹಿತಿ ನೀಡಿ ಕ್ರಮ ಕೈಗೊಳ್ಳುವಂತೆ ಮನವಿ ಮಾಡುವದಾಗಿ ಹೇಳಿದರು.

ಈ ಸಂದರ್ಭದಲ್ಲಿ ಪುರಸಭೆ ಮುಖ್ಯಾಧಿಕಾರಿ ಮಹೇಶ ಹಡಪದ, ಅರೋಗ್ಯ ನಿರೀಕ್ಷಕ ಮಂಜುನಾಥ ಮುದಗಲ್, ಪುರಸಭೆ ಸಿಬ್ಬಂದಿಗಳು, ಪೌರಕಾರ್ಮಿಕರು ಇದ್ದರು.

ಪಟ್ಟಣದ ಜನಸಂಖ್ಯೆಗೆ ಅನುಗುಣವಾಗಿ ಪುರಸಭೆಗೆ ಈಗಿರುವ ಪೌರಕಾರ್ಮಿಕರ ಸಂಖ್ಯೆ ಬಹಳ ಕಡಿಮೆ ಇದ್ದು, ಹೆಚ್ಚಿನ ಪೌರಕಾರ್ಮಿಕರನ್ನು ನೇಮಿಸಿಕೊಳ್ಳಲು ಸರಕಾರಕ್ಕೆ ಒತ್ತಾಯಿಸುವದಾಗಿ ಹೇಳಿದರು. ಬೇಸಿಗೆಯಾಗಿರುವದರಿಂದ ಅನೇಕ ರೋಗ-ರುಜಿನಗಳು ಬರುವ ಸಂಭವ ಇರುವದರಿಂದ ಸ್ವಚ್ಛತೆಗೆ ಆದ್ಯತೆ ನೀಡಿ ಎಂದು ಮುಖ್ಯಾಧಿಕಾರಿಗಳಿಗೆ ತಿಳಿಸಿದರು.

# ವಿದ್ಯಾರ್ಥಿಗಳು ಶಿಸ್ತು-ಸಂಯಮ ಬೆಳೆಸಿಕೊಳ್ಳಿ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಜೀವನದಲ್ಲಿ ಉನ್ನತ ಸ್ಥಾನಗಳನ್ನು ಪಡೆಯಲು ನಿಮ್ಮಲ್ಲಿ ಶಿಸ್ತು ಹಾಗೂ ಸಂಯಮವನ್ನು ಬೆಳೆಸಿಕೊಳ್ಳಬೇಕು. ಬರೀ ಹುಡುಗಾಟ ಜೀವನವಲ್ಲ. ಹುಡುಗಾಟವನ್ನೇ ಮಾಡುತ್ತ ನಡೆದರೆ ಮುಂದೆ ನಿಮ್ಮ ಜೀವನವೇ ಹುಡುಗಾಟವಾದೀತು. ಇದರಿಂದ ನಿಮ್ಮ ತಂದೆ-ತಾಯಿಗಳು ಪಶ್ಚಾತ್ತಾಪ ಅನುಭವಿಸುತ್ತಾರೆ. ನಿಮ್ಮ ಜೀವನ ಹಾಗಾಗಬಾರದು ಎಂದು ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ ವಿದ್ಯಾರ್ಥಿಗಳಿಗೆ ಹೇಳಿದರು.



ಸಮೀಪದ ನಿಡಗುಂದಿ ಗ್ರಾಮದ ಡಾ. ವೀರಪ್ಪ ಸಂಕನೂರ ಸರಕಾರಿ ಪ.ಪೂ. ಕಾಲೇಜಿನಲ್ಲಿ ನಡೆದ ದ್ವಿತೀಯ ಪಿಯುಸಿ ವಿದ್ಯಾರ್ಥಿಗಳ ಬೀಳ್ಕೊಡುಗೆ ಸಮಾರಂಭದಲ್ಲಿ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡು ಅವರು ಮಾತನಾಡಿದರು.

ವಿದ್ಯಾರ್ಥಿ ಜೀವನದಲ್ಲಿ ಪಿಯುಸಿ ಹಂತ ಮಹತ್ವದ್ದು. ಈಗ ನೀವು ಉತ್ತಮ ಅಂಕಗಳನ್ನು ಪಡೆದು ಉತ್ತಮ ಶ್ರೇಣಿಯಲ್ಲಿ ಪಾಸಾದರೆ ನಿಮ್ಮ ಜೀವನ ಸುಂದರವಾಗುತ್ತದೆ. ನಿಮಗೆ ಪ್ರೋತ್ಸಾಹ ನೀಡುವುದಕ್ಕೆಂದು ನಿಗದಿತ ಹಣವನ್ನು ಬ್ಯಾಂಕಿನಲ್ಲಿಟ್ಟು ಅದರ ಬಡ್ಡಿಯಲ್ಲಿ ಪ್ರತಿ ವರ್ಷ ಕಾಲೇಜಿಗೆ ಪ್ರಥಮ ಬರುವವರಿಗೆ 3000 ರೂ, ದ್ವಿತೀಯ 2000 ರೂ ಮತ್ತು ತೃತೀಯ 1000 ರೂಗಳ ಬಹುಮಾನ ನೀಡಲಾಗುವದೆಂದು ಸಂಕನೂರ ಹೇಳಿದರು.

ಕಾಲೇಜು ಅಭಿವೃದ್ಧಿ ಸಮಿತಿಯ ಉಪಾಧ್ಯಕ್ಷ ಸುಭಾಸ ಸಂಕನೂರ ಅಧ್ಯಕ್ಷತೆ ವಹಿಸಿದ್ದರು. ಪ್ರಾಚಾರ್ಯ ಎಸ್.ಆರ್. ಕರಮುಡಿ ಪ್ರಾಸ್ತಾವಿಕ ನ್ುಡಿಗಳ್ನಾಡಿದ್ರು. ಉಪನ್ಯಾಸಕ ಎಸ್.ಎಸ್. ಹಿರೇಮಠ ವಿದ್ಯಾರ್ಥಿಗಳಿಗೆ ಹಿತ ನುಡಿಗಳನ್ನು ಹೇಳಿದರು. ವಿದ್ಯಾರ್ಥಿನಿ ಕಾವೇರಿ ರಾಮಶೆಟ್ಟಿ ಅನಿಸಿಕೆಗಳನ್ನು ಹಂಚಿಕೊಂಡಳು.

ಗ್ರಾ.ಪಂ ಮಾಜಿ ಅಧ್ಯಕ್ಷ ಜಗದೀಶ ಕರಡಿ, ಶಶಿಧರ ಹೊಟ್ಟಿನ, ನಿವೃತ್ತ ಮುಖ್ಯ ಶಿಕ್ಷಕ ಎನ್.ವಿ. ಜೋಷಿ ವೇದಿಕೆಯ ಮೇಲಿದ್ದರು. ಉಪನ್ಯಾಸಕ ಬಿ.ಬಿ. ಇಟಗಿ ಸ್ವಾಗತಿಸಿದರು. ಎಚ್.ಎ. ಕರ್ನೂಲ ನಿರೂಪಿಸಿದರು.

# ಆರೆಂಟನೂರು ಮಂಜುನಾಥಗೆ ಉತ್ತಮ ನಾಯಕತ್ವ ಪ್ರಶಸ್ತಿ

■ವಿಜಯಸಾಕ್ಷಿ ಸುದ್ದಿ, ಕೊಪ್ಪಳ

ಇತ್ತೀಚೆಗೆ ಹೈದರಬಾದ್‌ನ ಉಸ್ಮನಿಯಾ ವಿಶ್ವವಿದ್ಯಾಲಯದ ನೇತೃತ್ವದಲ್ಲಿ ನಡೆದ ದೈಹಿಕ ಶಿಕ್ಷಣ ಅಂತರ್‌ರಾಷ್ಟ್ರೀಯ ವಿಚಾರ ಸಂಕಿರಣದಲ್ಲಿ ಯೋಗ ಕ್ರೀಡೆ ಸಂಬಂಧಿಸಿದಂತೆ ಮಂಡಿಸಿದ ಬರಹವನ್ನು ಹಾಗೂ ಬಹುಶ್ರುತ ಸೇವೆಯನ್ನು ಗುರುತಿಸಿ, ಗೌರವಿಸಿ ಶ್ರೀ ವಿಜಯನಗರ ಕೃಷ್ಣದೇವರಾಯ ವಿಶ್ವವಿದ್ಯಾಲಂುದ ಅಡಿಯಲ್ಲಿ ಬರುವ ದೈಹಿಕ ನಿರ್ದೇಶಕರುಗಳಾದ ಹರಪನಹಳ್ಳಿ ಕೊಟ್ರೇಶ್, ಕಡ್ಲಿ ರೀಟಾ, ಹಾಗೂ ಆರೆಂಟನೂರು ಮಂಜುನಾಥ ಇವರಿಗೆ ಕ್ರೀಡಾ ಸಂಘಟನೆಯು "ಉತ್ತಮ ನಾಯಕತ್ವ" ಎಂಬ




ರಾಷ್ಟ್ರೀಯ ಪ್ರಶಸ್ತಿ ನೀಡಿ ಗೌರವಿಸಲಾಯಿತು. ಈ ಸಮ್ಮೇಳನದಲ್ಲಿ ಐದು ದೇಶದಿಂದ 350 ಜನ ದೈಹಿಕ ಶಿಕ್ಷಣ ವಿದ್ವಾಸರು, ಪ್ರಾಧ್ಯಾಪಕರು ಮತ್ತು ಸಂಶೋಧಕರು ಭಾಗವಹಿಸಿದ್ದರು. ವಾಲ್ಮೀಕಿ ಸಮೂದಯದವರು ಹಾಗೂ ಅನೇಕ ಸಂಘ ಸಂಸ್ಥೆಗಳ ಮುಖಂಡರು ಹರ್ಷ ವ್ಯಕ್ತಪಡಿಸಿದ್ದಾರೆ.

# ಪುರಾಣ-ಪ್ರವಚನಗಳಿಂದ ವ್ಯಕ್ತಿತ್ವ ನಿರ್ಮಾಣ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಯಾವುದೇ ವ್ಯಕ್ತಿಯ ವ್ಯಕ್ತಿತ್ವವನ್ನು ನಿರ್ಮಿಸುವಲ್ಲಿ ಪುರಾಣ-ಪ್ರವಚನಗಳ ಪಾತ್ರ ಬಹಳಷ್ಟು ದೊಡ್ಡದಿದೆ. ಆದರೆ ಈಗಿನವರು ಪುರಾಣದಲ್ಲೇನಿದೆ ಎಂದು ಮೂಗು ಮುರಿಯುತ್ತಿರುವುದು ವಿಷಾದನೀಯ. ಇವುಗಳನ್ನು ಅಸಡ್ಡೆ ಮಾಡದೆ ನಿತ್ಯವೂ ಬಂದು ಪುರಾಣ ಕೇಳಿದರೆ ಅದರಲ್ಲಿನ ವ್ಯಕ್ತಿಗಳ ವ್ಯಕ್ತಿತ್ವದ ಅರಿವು ನಿಮಗಾಗುತ್ತದೆ. ಇದರಿಂದ ನಿಮ್ಮ ಜೀವನವನ್ನು ಸುಧಾರಿಸಿಕೊಳ್ಳಬಹುದು ಎಂದು ನಿಡಗುಂದಿಕೊಪ್ಪದ ಶಾಖಾ ಶಿವಯೋಗ ಮಂದಿರದ ಪೀಠಾಧಿಪತಿಗಳಾದ ಶ್ರೀ ಅಭಿನವ ಚನ್ನಬಸವ ಸ್ವಾಮೀಜಿ ಹೇಳಿದರು. ಸಮೀಪದ ನಿಡಗುಂದಿಕೊಪ್ಪದಲ್ಲಿ ಫೆ. 21ರಂದು ನಡೆಯುವ ಶ್ರೀ ಕುಮಾರೇಶ್ವರ ಜಾತ್ರಾ ಮಹೋತ್ಸವದ ಅಂಗವಾಗಿ



ಪ್ರಾರಂಭಗೊಂಡ ಶ್ರೀ ಅನ್ನದಾನೇಶ್ವರ ಪುರಾಣ ಪ್ರಾರಂಭದ ದಿವ್ಯ ಸಾನ್ನಿಧ್ಯ ವಹಿಸಿ ಅವರು ಆಶೀರ್ವಚನ ನೀಡಿದರು.0 ಈ ಸಾರೆಯ ಜಾತ್ರಾ ಮಹೋತ್ಸವವು ವಿಶೇಷತೆಯಿಂದ ಕೂಡಿದೆ. ಶ್ರೀ ಕುಮಾರೇಶ್ವರ ಜಾತ್ರಾ ಮಹೋತ್ಸವವು ಫೆ. 21ರಂದು ಜರುಗುತ್ತಿದ್ದರೆ, ಇದರ ಮುನ್ನಾ ದಿನ ಫೆ. 20ರಂದು ಗಜೇಂದ್ರಗಡ ತಾಲೂಕಿನ ಪ್ರಪ್ರಥಮ ಅಕ್ಷರ ಜಾತ್ರೆ ನಡೆಯುತ್ತಿದೆ. ಇದಕ್ಕೆ ಈಗಾಗಲೇ ಎಲ್ಲ ಸಿದ್ಧತೆಗಳು ಪೂರ್ಣಗೊಂಡಿದ್ದು, ನುಡಿ ಜಾತ್ರೆ ನಡೆಸಲು ಶ್ರೀಮಠದ ಎಲ್ಲ ಭಕ್ತರು, ತಾಲೂಕಿನ ಎಲ್ಲ ಕನ್ನಡಾಭಿಮಾನಿಗಳು, ಜಿಲ್ಲಾ ಮತ್ತು ತಾಲೂಕಾ ಕಸಾಪ ಘಟಕಗಳು ಮತ್ತು ಶಾಸಕರು ಎಲ್ಲರೂ ಒಮ್ಮನದಿಂದ ಶ್ರಮಿಸುತ್ತಿದ್ದಾರೆ. ಎರಡೂ ದಿನಗಳ ಜಾತ್ರೆಯಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಎರಡೂ ಕಾರ್ಯಕ್ರಮಗಳನ್ನು ಯಶಸ್ವಿಗೊಳಿಸಿ ಎಂದು ಶ್ರೀಗಳು ಹೇಳಿದರು. ಶ್ರೀಧರಗಡ್ಡಿಯ ಶ್ರೀ ಮರಿಕೊಟ್ಟೂರು ದೇಶಿಕರು ಲಿಂ. ಅಭಿನವ ಅನ್ನದಾನ ಮಹಾಸ್ವಾಮಿಗಳವರ ಜೀವನ ದರ್ಶನ ಪುರಾಣ ಪ್ರವಚನವನ್ನು ಪ್ರಾರಂಭಿಸಿದರು. ಕಳಕಪ್ಪ ಕಮ್ಮಾರ, ಪರಶುರಾಮ ಸುಣಗಾರ, ಮುತ್ತಣ್ಣ ಬಡಿಗೇರ, ಮಲ್ಲಿಕಾರ್ಜುನ ಸರ್ವಿ ಸಂಗೀತ ಸೇವೆ ನೀಡಿದರು. ಬೆಳಿಗ್ಗೆ ನಡೆದ ಷಟ್‌ಸ್ಥಲ ಧ್ವಜಾರೋಹಣವನ್ನು ಶ್ರೀ ಮರಿಕೊಟ್ಟೂರು ಸ್ವಾಮೀಜಿ ನೆರವೇರಿಸಿದರು. ಈ ಸಂದರ್ಭದಲ್ಲಿ ನಿಡಗುಂದಿಕೊಪ್ಪದ ಗ್ರಾಮಸ್ಥರಲ್ಲದೆ, ಸುತ್ತಲಿನ ಗ್ರಾಮಗಳ ಸದ್ಭಕ್ತರು ಭಾಗವಹಿಸಿದ್ದರು.

# ಎಬಿವಿಪಿ ಕಾರ್ಯಕರ್ತರಿಂದ ಭಿಕ್ಷಾಟನೆ, ಪ್ರತಿಭಟನೆ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ರಾಜ್ಯ ಸರಕಾರದ ಆರ್ಥಿಕ ಪರಿಸ್ಥಿತಿಯ ನೆಪ ಇಟ್ಟುಕೊಂಡು 9 ವಿಶ್ವವಿದ್ಯಾನಿಲಯಗಳನ್ನು ಮುಚ್ಚಲು ಹೊರಟಿರುವ ಸರಕಾರದ ಕ್ರಮವನ್ನು ಪ್ರತಿಭಟಿಸಿ ಮಂಗಳವಾರ ಪಟ್ಟಣದಲ್ಲಿ ಎಬಿವಿಪಿ ಕಾರ್ಯಕರ್ತರು ಭಿಕ್ಷಾಟನೆ ಮಾಡುವ ಮೂಲಕ ವಿನೂತನವಾಗಿ ಪ್ರತಿಭಟಿಸಿದರು.

ಈ ವೇಳೆ ಮಾತನಾಡಿದ ಎಬಿವಿಪಿ ನಗರ ಕಾರ್ಯದರ್ಶಿ ಅಭಿಷೇಕ ಉಮಚಗಿ, ಸರಕಾರ ಆರ್ಥಿಕ ಪರಿಸ್ಥಿತಿಯ ನೆಪ ಇಟಕೊಂಡು 9 ವಿಶ್ವವಿದ್ಯಾಲಯಗಳನ್ನ ಮುಚ್ಚುಲು ಹೊರಟಿದ್ದು, ಈ ನಿರ್ಧಾರವನ್ನು ಎಬಿವಿಪಿ ಖಂಡಿಸುತ್ತದೆ. ರಾಜ್ಯ ಸರಕಾರ ವಿದ್ಯಾರ್ಥಿಗಳ ಜೀವನದ ಜೊತೆ ಚೆಲ್ಲಾಟ ಆಡುತ್ತಿದೆ. ಗ್ಯಾರಂಟಿಗೆ ಹಣ ಒದಗಿಸಲಾಗದೆ ವಿಶ್ವವಿದ್ಯಾಲಯಗಳಿಗೆ ಆರ್ಥಿಕ ಸಮಸ್ಯೆಯ ನೆಪ ಮಾಡಿಕೊಂಡು ಮುಚ್ಚುವ ನಿರ್ಧಾರ ಮಾಡಿದ್ದು ಖಂಡನೀಯ. ಕೂಡಲೇ ನಿರ್ಧಾರದಿಂದ ಹಿಂದೆ ಸರಿಯಬೇಕು. ಇಲ್ಲವಾದರೆ ರಾಜ್ಯಾದ್ಯಂತ ಹೋರಾಟ ತೀವ್ರಗೊಳಿಸಲಾಗುವುದು ಎಂದು ಎಚ್ಚರಿಸಿದರು.

ತಾಲೂಕಾ ಸಂಚಾಲಕ ಪ್ರಕಾಶ್ ಕುಂಬಾರ, ಸಹ ಸಂಚಾಲಕ ವಿನಯ್ ಸಪಡ್ಲ, ಯಶ್ವಂತ್ ಶಿರಹಟ್ಟಿ, ಮನೋಜ್ ತಂಡಿಗೇರ, ವಿನಾಯಕ ಕುಂಬಾರ, ಅಭಿಷೇಕ್ ಇಸನಗೌಡರ, ವಿನಾಯಕ ಹುಂಬಿ, ಅರವಿಂದ ಇಚ್ಚಂಗಿ, ಯುವರಾಜ್ ದುರ್ಗದ, ಈರಣ್ಣ ಕುಂಬಾರ ಸೇರಿದಂತೆ ಎಬಿವಿಪಿ ಕಾರ್ಯಕರ್ತರು ಇದ್ದರು.

# ಕಲಿಕಾ ಹಬ್ಬದಿಂದ ಸೃಜನಶೀಲತೆ ಅನಾವರಣ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪ್ರತಿಯೊಬ್ಬ ಮಕ್ಕಳಲ್ಲಿಯೂ ಪ್ರತಿಭೆ ಇರುತ್ತದೆ. ಅಂತಹ ಮಕ್ಕಳಿಗೆ ಶಾಲೆಗಳಲ್ಲಿ ಕಲಿಕಾ ಹಬ್ಬಗಳು ಅವರ ಸೃಜನಶೀಲತೆಯನ್ನು ಹೊರಹಾಕಲು ಸಹಾಯ ಮಾಡುತ್ತವೆ ಎಂದು ಪುರಸಭೆ ಸದಸ್ಯರಾದ ರಾಜೀವ್ ಕುಂಬಿ ಹೇಳಿದರು. ಅವರು ಮಂಗಳವಾರ ಸರ್ಕಾರಿ ಮಾದರಿ ಹೆಣ್ಣುಮಕ್ಕಳ ಪ್ರಾಥಮಿಕ ಶಾಲೆಯಲ್ಲಿ ಲಕ್ಷ್ಮೇಶ್ವರ ದಕ್ಷಿಣ ಕ್ಲಸ್ಟರ್ ಮಟ್ಟದ ಎಫ್‌ಎಲ್‌ಎನ್ ಕಲಿಕಾ ಹಬ್ಬ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಮಕ್ಕಳಲ್ಲಿ ಅಡಗಿರುವ ಪ್ರತಿಭೆಗೆ ಅನೇಕ ಚಟುವಟಿಕೆಗಳನ್ನು ಶಾಲಾ ಹಂತದಲ್ಲಿ ಏರ್ಪಡಿಸಿ ಅವರಿಗೆ ಅವಕಾಶ ಮಾಡಿಕೊಡುತ್ತಿರುವದು ಉತ್ತಮ ವಿಚಾರವಾಗಿದ್ದು, ಕಲಿಕೆಯಲ್ಲಿ ಹಿಂದುಳಿದ ಮಕ್ಕಳಿಗೂ ಸಹ ಪ್ರೋತ್ಸಾಹ ನೀಡಿ ಪ್ರತಿಭೆ ಪ್ರದರ್ಶಿಸಲು ಅವಕಾಶ ಮಾಡಿಕೊಡುವ ನಿಟ್ಟಿನಲ್ಲಿ ಶಿಕ್ಷಕರು ಶ್ರಮವಹಿಸಬೇಕು ಎಂದು ಹೇಳಿದರು. ಕ.ರಾ.ಪ್ರಾ.ಶಾ ಶಿಕ್ಷಕರ ಸಂಘದ ಅಧ್ಯಕ್ಷರಾದ ಬಿ.ಎಸ್. ಹರ್ಲಾಪೂರ ಮಾತನಾಡಿ, ಇಂತಹ ಕಾರ್ಯಕ್ರಮಗಳು ಮಕ್ಕಳ ಕಲಿಕಾ ಸಾಮರ್ಥ್ಯ ಹೆಚ್ಚಿಸುವಲ್ಲಿ ಮಹತ್ವದ ಪಾತ್ರ ವಹಿಸುತ್ತವೆ ಎಂದರು.ತಾಲೂಕು ದೈಹಿಕ ಶಿಕ್ಷಣಾಧಿಕಾರಿ ಎಂ.ಎಂ. ಹವಳದ, ಎಸ್‌ಡಿಎಮ್‌ಸಿ ಅಧ್ಯಕ್ಷ ಮಲ್ಲೇಶಪ್ಪ ಬಸಾಪುರ, ಉಪಾಧ್ಯಕ್ಷರಾದ ನಿಖಿತಾ ಶೇರಖಾನೆ ಚಂದ್ರು ನೇಕಾರ, ಸರಕಾರಿ ನೌಕರ ಸಂಘದ ತಾಲೂಕಾಧ್ಯಕ್ಷ ಗುರು ಹವಳದ, ಕಾರ್ಯದರ್ಶಿ ಎಂ.ಎ. ನದಾಫ್, ಮಂಜು ವಾರದ, ಡಿ.ಡಿ. ಲಮಾಣಿ, ಎನ್‌ಪಿಎಸ್ ನೌಕರರ ಸಂಘದ ಅಧ್ಯಕ್ಷ ಎಫ್.ಎಸ್. ತಳವಾರ, ಪ್ರಧಾನ ಗುರುಗಳಾದ ಬಿ.ಎಮ್. ಕುಂಬಾರ, ಎಸ್. ಎಸ್. ಜಿರಂಕಳಿ, ಐ.ಬಿ. ಜಕ್ಕನಗೌಡ್ರ, ಸಿಆರ್‌ಪಿ ಸತೀಶ್ ಬೊಮಲೆ, ಉಮೇಶ್ ನೇಕಾರ, ಎನ್.ಎ. ಮುಲ್ಲಾ ಹಾಗೂ ಲಕ್ಷ್ಮೇಶ್ವರ ದಕ್ಷಿಣ ಕ್ಲಸ್ಟರ್‌ನ ಎಲ್ಲಾ ಸರ್ಕಾರಿ ಶಾಲೆಗಳ ಮುಖ್ಯ ಶಿಕ್ಷಕರು ಮತ್ತು ವಿದ್ಯಾರ್ಥಿಗಳು ಹಾಜರಿದ್ದರು. ಎಚ್.ಡಿ. ನಿಂಗರೆಡ್ಡಿ ಸ್ವಾಗತಿಸಿದರು, ಎನ್.ಎಸ್. ಬಂಕಾಪುರ ನಿರ್ವಹಿಸಿದರು. ಆರ್.ಎಮ್. ಶಿರಹಟ್ಟಿ ವಂದಿಸಿದರು.


ಕರ್ನಾಟಕ ಸರ್ಕಾರ
ಜಿಲ್ಲಾ ಪಂಚಾಯತ ಗದಗ
ತಾಲೂಕ ಪಂಚಾಯತ ರೋಣ

**ಗ್ರಾಮ ಪಂಚಾಯತ ಕಾರ್ಯಾಲಯ, ಸವಡಿ**

ಕ್ರ.ಸಂ:ಗ್ರಾ.ಪಂ.ಸ/ನರೇಗಾ/ದ.ಪ.ಪ್ರ/2024–25 ದಿನಾಂಕ: 19.02.2025

**ದರಪಟ್ಟಿ ಪ್ರಕಟಣೆ**

2024–2025 ನೇ ಸಾಲಿನ ಮಹಾತ್ಮಾಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿಯಲ್ಲಿ ಅನುಷ್ಠಾನಗೊಳ್ಳುವ ಈ ಕೆಳಕಂಡ ಕಾಮಗಾರಿಗಳಿಗೆ ವಿವಿದ ರೀತಿಯ ಸಾಮಗ್ರಿಗಳನ್ನು ಸಂಗ್ರಹಿಸುವ ಸಂಬಂಧ ದರಪಟ್ಟಿ ಆಹ್ವಾನಿಸಲಾಗಿದೆ. ಇದರ ಪ್ರಯುಕ್ತ ಜಿಲ್ಲಾ ಡಿ.ಪಿ.ಸಿ ಲಾಗಿನ್ನಲ್ಲಿ ನೊಂದಾಯಿತ ಆಸಕ್ತ ಸರಬರಾಜುದಾರರು ದರಪಟ್ಟಿಯನ್ನು ಸಲ್ಲಿಸಬಹುದಾಗಿದ್ದು ವಿವರ ಮತ್ತು ವೇಳಾಪಟ್ಟಿ ಈ ಕೆಳಗಿನಂತಿದೆ.

| ಕ್ರ.ಸಂ. | ಕಾಮಗಾರಿಯ ಹೆಸರು | ಕಾಮಗಾರಿಯ ಅಂದಾಜು ಮೊತ್ತ | ಕಾಮಗಾರಿಗಳಿಗೆ ಪೂರೈಸಬೇಕಾದ ಸಾಮಗ್ರಿ ಮೊತ್ತ |
|---|---|---|---|
| 01 | ಸವಡಿ ಗ್ರಾಮದ ಸಂಗಪ್ಪ ದಂಡಿನ ಮನೆ ಹತ್ತಿರ ಸಿ ಸಿ ರಸ್ತೆ ನಿರ್ಮಾಣ | 200000.00 | 136000.00 |
| 02 | ಸವಡಿ ಗ್ರಾಮದ ಸಂಗಣ್ಣ ಪ್ಯಾಟೆಪ್ಪ ಪವಾಡಶೆಟ್ಟಿ ಇವರ ಮನೆ ಮುಂದೆ ಗಟಾರ ನಿರ್ಮಾಣ | 280000.00 | 169000.00 |
| 03 | ಸವಡಿ ಗ್ರಾಮದ 5ನೇ ವಾರ್ಡಿನ ಹನಮಂತಪ್ಪ ಹಕ್ಕಿ ಇವರ ಮನೆ ಮುಂದೆ ಪೂರ್ವ ದಿಕ್ಕಿಗೆ ಗಟಾರ ನಿರ್ಮಾಣ | 300000.00 | 182700.00 |
| 04 | ಸವಡಿ ಗ್ರಾಮದ ಗೊಂದಲಗೇರಿ ಸಮಾಜದ ಜಗದೀಶ ಇವರ ಮನೆ ಹತ್ತಿರ ಸಿ ಸಿ ರಸ್ತೆ ನಿರ್ಮಾಣ | 230000.00 | 149200.00 |
| 05 | ಸವಡಿ ಗ್ರಾಮದ 1ನೇ ವಾರ್ಡಿನ ರಾಮಣ್ಣ ತೋಟದ ಮನೆಯಿಂದ ಶರಣಪ್ಪ ದೊಡ್ಡಣ್ಣವರ ಮನೆಯವರೆಗೆ ಸಿ ಸಿ ರಸ್ತೆ ನಿರ್ಮಾಣ | 150000.00 | 101500.00 |
| 06 | ಸವಡಿ ಗ್ರಾಮದ 1ನೇ ವಾರ್ಡಿನ ಕುಂಬಾರ ಮನೆಯಿಂದ ಮೇನ್ ರಸ್ತೆಯವರೆಗೆ ಸಿ ಸಿ ರಸ್ತೆ ನಿರ್ಮಾಣ | 150000.00 | 101500.00 |
| 07 | ಸವಡಿ ಗ್ರಾಮದ 2ನೇ ವಾರ್ಡಿನ ಸಂಗಪ್ಪ ಕರಡಿ ಇವರ ಮನೆಯಿಂದ ಮೇನ್ ರಸ್ತೆಯವರೆಗೆ ಸಿ ಸಿ ರಸ್ತೆ ನಿರ್ಮಾಣ | 200000.00 | 136000.00 |
| 08 | ಸವಡಿ ಗ್ರಾಮದ ಸರಕಾರಿ ಉರ್ದು ಶಾಲೆಯಲ್ಲಿ ಕಾಂಪೌಂಡ್ ನಿರ್ಮಾಣ | 499000.00 | 312000.00 |

1) ದರಪಟ್ಟಿ ಅವಧಿ 19.02.205 ರಿಂದ 28.02.2025 ರವರೆಗೆ
2) ಭರ್ತಿ ಮಾಡಿದ ಅರ್ಜಿಗಳನ್ನು ಸಲ್ಲಿಸುವ ಕೊನೆಯ ದಿನಾಂಕ 28.02.2025 ಮಧ್ಯಾಹ್ನ 12.30 ಘಂಟೆಯವರೆಗೆ.
3) ದರಪಟ್ಟಿ ತೆರೆಯುವ ದಿನಾಂಕ 28.02.2025 ಮಧ್ಯಾಹ್ನ 12.30 ಘಂಟೆಯ ನಂತರ.
4) ಅರ್ಜಿ ಸಲ್ಲಿಸುವ ಆಸಕ್ತ ನೊಂದಾಯಿತರು ಪ್ರತ್ಯೇಕವಾಗಿ ದರಪಟ್ಟಿಗಳನ್ನು ಸಲ್ಲಿಸತಕ್ಕದ್ದು.
5) ಜಿಲ್ಲಾ ಪಂಚಾಯತ ಡಿ.ಪಿ.ಸಿ ಲಾಗಿನ್ನಾಲ್ಲಿ ನೊಂದಾಯಿತ ಆಸಕ್ತ ಸರಬರಾಜುದಾರರು ಮಾತ್ರ ದರಪಟ್ಟಿಯನ್ನು ಸಲ್ಲಿಸಬಹುದು.
6) ಷರತ್ತುಗಳು ಹಾಗೂ ಸಾಮಗ್ರಿ ವಿವರ ಮತ್ತು ಇತರೆ ವಿಷಯಗಳ ಮಾಹಿತಿಗಾಗಿ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಗ್ರಾಮ ಪಂಚಾಯತ ಕಾರ್ಯಾಲಯ ಇವರನ್ನು ಕಛೇರಿ ಸಮಯದ ವೇಳೆಯಲ್ಲಿ ಸಂಪರ್ಕಿಸಿ ಪಡೆಯಬಹುದಾಗಿದೆ.

ಸಹಿ ಆಗಿದೆ/–
ಅಧ್ಯಕ್ಷರು,
ಗ್ರಾಮ ಪಂಚಾಯತ, ಸವಡಿ

ಸಹಿ ಆಗಿದೆ/–
ಪಂಚಾಯತ ಅಭಿವೃದ್ಧಿ ಅಧಿಕಾರಿ,
ಗ್ರಾಮ ಪಂಚಾಯತ, ಸವಡಿ



ಕರ್ನಾಟಕ ಸರ್ಕಾರ
ಜಿಲ್ಲಾ ಪಂಚಾಯತ ಗದಗ
ತಾಲೂಕ ಪಂಚಾಯತ ರೋಣ

**ಗ್ರಾಮ ಪಂಚಾಯತ ಕಾರ್ಯಾಲಯ, ಹುನಗುಂಡಿ**

ಕ್ರ.ಸಂ:ಗ್ರಾ.ಪಂ./ಹುನಗುಂಡಿ/ನರೇಗಾ/ದ.ಪ.ಪ್ರ/2024–25 ದಿನಾಂಕ: 18–02–2025

**ದರಪಟ್ಟಿ ಪ್ರಕಟಣೆ**

2024–2025 ನೇ ಸಾಲಿನ ಮಹಾತ್ಮಾಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿಯಲ್ಲಿ ಅನುಷ್ಠಾನಗೊಳ್ಳುವ ಈ ಕೆಳಕಂಡ ಕಾಮಗಾರಿಗಳಿಗೆ ವಿವಿದ ರೀತಿಯ ಸಾಮಗ್ರಿಗಳನ್ನು ಸಂಗ್ರಹಿಸುವ ಸಂಬಂಧ ದರಪಟ್ಟಿ ಆಹ್ವಾನಿಸಲಾಗಿದೆ. ಇದರ ಪ್ರಯುಕ್ತ ಜಿಲ್ಲಾ ಡಿ.ಪಿ.ಸಿ ಲಾಗಿನ್ನಲ್ಲಿ ನೊಂದಾಯಿತ ಆಸಕ್ತ ಸರಬರಾಜುದಾರರು ದರಪಟ್ಟಿಯನ್ನು ಸಲ್ಲಿಸಬಹುದಾಗಿದ್ದು ವಿವರ ಮತ್ತು ವೇಳಾಪಟ್ಟಿ ಈ ಕೆಳಗಿನಂತಿದೆ.

| ಕ್ರ.ಸಂ. | ಕಾಮಗಾರಿಯ ಹೆಸರು | ಕಾಮಗಾರಿಯ ಅಂದಾಜು ಮೊತ್ತ (ರೂ. ಲಕ್ಷಗಳಲ್ಲಿ) | ಕಾಮಗಾರಿಗಳಿಗೆ ಪೂರೈಸಬೇಕಾದ ಸಾಮಗ್ರಿ ಮೊತ್ತ (ರೂ. ಲಕ್ಷಗಳಲ್ಲಿ) |
|---|---|---|---|
| 01 | ಹುನಗುಂಡಿ ಗ್ರಾಮದ ಚಿದಾನಂದ ಜಂತ್ಲಿ ಇವರ ಮನೆಯಿಂದ ಶರಣಪ್ಪ ಕಪ್ಪಕನವರ ಇವರ ಮನೆಯ ವರೆಗೂ ಸಿ.ಸಿ ರಸ್ತೆ ನಿರ್ಮಾಣ | 1.00 | 0.71 |
| 02 | ಹುನಗುಂಡಿ ಗ್ರಾಮದ ನವಗ್ರಾಮದಲ್ಲಿ ರಸ್ತೆ ಅಭಿವೃದ್ಧಿಪಡಿಸುವುದು | 1.00 | 0.61 |
| 03 | ಹುನಗುಂಡಿ ಗ್ರಾಮದ ರತ್ನವ್ವ ಬೀರಣ್ಣವರ ಇವರ ಮನೆಯಿಂದ ಶ್ರೀ ದುರ್ಗಾದೇವಿ ದೇವಸ್ಥಾನದ ವರೆಗೂ ಸಿ.ಸಿ ರಸ್ತೆ ನಿರ್ಮಾಣ | 1.00 | 0.72 |
| 04 | ಹುನಗುಂಡಿ ಗ್ರಾಮದ ಹನಮವ್ವ ಸೋಮಲಿಂಗಪ್ಪ ತಳವಾರ ಇವರ ಮನೆಯಿಮದ ನಿಂಗಪ್ಪ ನರಿಯಪ್ಪ ಕಂಬಳಿ ಇವರ ಮನೆಯ ವರೆಗೂ ಸಿ.ಸಿ. ರಸ್ತೆ ನಿರ್ಮಾಣ | 2.00 | 1.32 |
| 05 | ಹುನಗುಂಡಿ ಗ್ರಾಮದ ಹನಮಪ್ಪ ನವಳಳ್ಳಿ ಇವರ ಮನೆಯಿಂದ ಹಡಪದ ಇವರ ಮನೆಯ ವರೆಗೂ ಗಟಾರ ನಿರ್ಮಾಣ | 1.00 | 0.71 |
| 06 | ಹುನಗುಂಡಿ ಗ್ರಾಮದ ನೀಲಪ್ಪ ಹಾವರಾಣಿ ಮನೆಯಿಂದಅಂಗಡಿ ಇವರ ಹೊಲದ ವರೆಗೂ ಗಟಾರ ನಿರ್ಮಾಣ | 1.00 | 0.71 |
| 07 | ಹುನಗುಂಡಿ ಗ್ರಾಮದ ದೇವಮ್ಮ ನಾಯ್ಕರ ಇವರ ಮನೆಯಿಂದ ಚಿಗಳ್ಳದ ವರೆಗೂ ಗಟಾರ ನಿರ್ಮಾಣ | 1.00 | 0.71 |
| 08 | ಹುನಗುಂಡಿ ಗ್ರಾಮದ ಮುದುಖಪ್ಪ ಕಂಬಳಿ ಇವರ ಮನೆಯಿಂದ ಮುಖ್ಯ ರಸ್ತೆಯ ವರೆಗೂ ಗಟಾರ ನಿರ್ಮಾಣ | 2.00 | 1.29 |
| 09 | ಬೆನಹಾಳ ಗ್ರಾಮದ ಶುದ್ದ ಕುಡಿಯುವ ನೀರಿನ ಘಟಕದಿಂದ ಶೇಖಪ್ಪ ಸೋಡಿ ಇವರ ಮನೆಯ ವರೆಗೂ ಗಟಾರ ನಿರ್ಮಾಣ | 4.90 | 3.19 |

1) ದರಪಟ್ಟಿ ಅವದಿ 19–02–2025 ರಿಂದ 27–02–2025 ರ ವರೆಗೆ
2) ಭರ್ತಿ ಮಾಡಿದ ಅರ್ಜಿಗಳನ್ನು ಸಲ್ಲಿಸುವ ಕೊನೆಯ ದಿನಾಂಕ 28–02–2025 ಮಧ್ಯಾಹ್ನ 12.30 ಗಂಟೆ
3) ದರಪಟ್ಟಿ ತೆರೆಯುವ ದಿನಾಂಕ 28–02–2025 ಮಧ್ಯಾಹ್ನ 12.30 ಘಂಟೆಯ ನಂತರ
4) ಅರ್ಜಿ ಸಲ್ಲಿಸುವ ಆಸಕ್ತ ನೊಂದಾಯಿತರು ಪ್ರತ್ಯೇಕವಾಗಿ ದರಪಟ್ಟಿಗಳನ್ನು ಸಲ್ಲಿಸತಕ್ಕದ್ದು.
5) ಜಿಲ್ಲಾ ಪಂಚಾಯತ ಡಿ.ಪಿ.ಸಿ ಲಾಗಿನ್ನಲ್ಲಿ ನೊಂದಾಯಿತ ಆಸಕ್ತ ಸರಬರಾಜುದಾರರು ಮಾತ್ರ ದರಪಟ್ಟಿಯನ್ನು ಸಲ್ಲಿಸಬಹುದು.
6) ಷರತ್ತುಗಳು ಹಾಗೂ ಸಾಮಗ್ರಿ ವಿವರ ಮತ್ತು ಇತರೆ ವಿಷಯಗಳು ಮಾಹಿತಿಗಾಗಿ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಲು ಗ್ರಾಮ ಪಂಚಾಯತ ಕಾರ್ಯಲಯ ಇವರನ್ನು ಕಛೇರಿ ಸಮಯದ ವೇಳೆಯಲ್ಲಿ ಸಂಪರ್ಕಿಸಿ ಪಡೆಯಬಹುದಾಗಿದೆ.

ಸಹಿ ಆಗಿದೆ/–
ಅಧ್ಯಕ್ಷರು,
ಗ್ರಾಮ ಪಂಚಾಯತ, ಹುನಗುಂಡಿ

ಸಹಿ ಆಗಿದೆ/–
ಪಂಚಾಯತ ಅಭಿವೃದ್ಧಿ ಅಧಿಕಾರಿ,
ಗ್ರಾಮ ಪಂಚಾಯತ, ಹುನಗುಂಡಿ


VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka